ಸಂಪುಟ : 11 ಸಂಚಿಕೆ: 63 ಪುಟ : 4+2 ಬೆಲೆ: 3.00 ಬುಧವಾರ ಎಪ್ರಿಲ್ 08 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್


# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 63 Pages : 4+2 Price : 3.00 Wednesday April 08 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಬಾರೋ ಬಾರೋ ಚಂದ್ರಮ ಕೃತಿಗೆ ಕನ್ನಡ ಚೂಡಾಮಣಿ ಪ್ರಶಸ್ತಿ






**■ವಿಜಯಸಾಕ್ಷಿ ಸುದ್ದಿ, ಗದಗ**

ವಿದ್ಯಾಧರ ಕನ್ನಡ ಪ್ರತಿಷ್ಠಾನ ಧಾರವಾಡ, ಪ್ರಜ್ವಲ ಟ್ರಸ್ಟ್ ಶಿರಸಿ ಅವರ ಸಂಯುಕ್ತ ಆಶ್ರಯದಲ್ಲಿ ಮಾತೋಶ್ರೀ ಜಾನಕಿಬಾಯಿ ರಂಗರಾವ ಮುತಾಲಿಕ ದೇಸಾಯಿ ಸ್ಮರಣಾರ್ಥ ನೀಡಲಾಗುವ ರಾಜ್ಯಮಟ್ಟದ ಪ್ರಶಸ್ತಿಗೆ ಡಾ. ತಯಬಅಲಿ ಅ. ಹೊಂಬಳ ಅವರ ಲೇಖನ, ಮಕ್ಕಳ ಸಾಹಿತ್ಯ ಲೋಕದಲ್ಲಿ ಮೆರೆದ ಕೃತಿ 'ಬಾರೋ ಬಾರೋ ಚಂದ್ರಮ' ಆಯ್ಕೆಯಾಗಿದ್ದು, "ಕನ್ನಡ ಚೂಡಾಮಣಿ" ರಾಜ್ಯ ಪ್ರಶಸ್ತಿ ದೊರಕಲಿದೆ.

ಈ ಪ್ರಶಸ್ತಿ 11 ಎಪ್ರಿಲ್ 2026 ರಂದು ಶಿರಸಿಯ ರಂಗಧಾಮದಲ್ಲಿ ಪ್ರದಾನ ಮಾಡಲಾಗುವುದು. ಈ ಕೃತಿ ಹಿಂದೆಯೇ "ರಾಷ್ಟ್ರೀಯ ಸಾಹಿತ್ಯಶ್ರೀ" ರಾಜ್ಯ ಪ್ರಶಸ್ತಿ ಗಳಿಸಿತ್ತು. ಡಾ. ತಯಬಅಲಿ ಅ. ಹೊಂಬಳರ ಪ್ರತಿಭೆ, ಕತೆಗಳಲ್ಲಿ ಮಕ್ಕಳಿಗೆ ಸೃಜನಾತ್ಮಕತೆಯನ್ನು ಹಂಚುವ ಶ್ರದ್ಧೆ ಪ್ರಶಂಸಾರ್ಹವೆಂದು ಕನ್ನಡ ಸಾಹಿತ್ಯ ಪ್ರಿಯರು, ಮಕ್ಕಳು, ಹಿರಿಯ ಚಿಂತಕರು ಅಭಿನಂದನೆ ವ್ಯಕ್ತಪಡಿಸಿದ್ದಾರೆ.

### ಗ್ರಾಮೀಣ ಪ್ರದೇಶಗಳಲ್ಲಿ ನಿರಂತರ ನೀರು ಪೂರೈಕೆಗಾಗಿ ಅಧಿಕಾರಿಗಳಿಗೆ ಶಾಸಕ ಡಾ. ಚಂದ್ರು ಲಮಾಣಿ ಸೂಚನೆ

# ಕುಡಿಯುವ ನೀರಿನ ಸಮಸ್ಯೆ ತಡೆಗೆ ಸಮನ್ವಯವೇ ಪರಿಹಾರ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಪಮಾನ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಪಿಡಿಓಗಳು ಹಾಗೂ ಆಡಳಿತಾಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಸೂಚಿಸಿದರು.




ಮಂಗಳವಾರ ತಾಲೂಕ ಪಂಚಾಯತ ಸಭಾಭವನದಲ್ಲಿ ನಡೆದ ಶಿರಹಟ್ಟಿ-ಲಕ್ಷ್ಮೇಶ್ವರ-ಮುಂಡರಗಿ ತಾಲೂಕು ಮಟ್ಟದ ಟಾಸ್ಕ್‌ಫೋರ್ಸ್ ಸಭೆಯಲ್ಲಿ ಮಾತನಾಡಿದ ಅವರು, ಗ್ರಾಮ ಪಂಚಾಯತ್ ಮಟ್ಟದಲ್ಲಿ ಆಡಳಿತ ಮಂಡಳಿ ಇಲ್ಲದಿರುವುದರಿಂದ ಅಧಿಕಾರಿಗಳು ಹೆಚ್ಚು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು. ಗ್ರಾಮಗಳಲ್ಲಿ ಉಂಟಾಗುವ ಸಮಸ್ಯೆಗಳನ್ನು ದಿನನಿತ್ಯ ತಾಲೂಕ ಪಂಚಾಯತ್ ಇಓ ಅವರಿಗೆ ತಿಳಿಸಬೇಕು ಹಾಗೂ ಆಡಳಿತಾಧಿಕಾರಿಗಳು ಸ್ಥಳಕ್ಕೆ ತೆರಳಿ ಸಮಸ್ಯೆ ಪರಿಹಾರಕ್ಕೆ ಮುಂದಾಗಬೇಕು ಎಂದರು.

ಸಭೆಯಲ್ಲಿ ಪಿಡಿಓಗಳು ಡಿಬಿಓಟಿ ಯೋಜನೆಯಡಿ ಗ್ರಾಮಗಳಿಗೆ ಅಗತ್ಯಕ್ಕೆ ತಕ್ಕಂತೆ ನೀರು ಪೂರೈಕೆಯಾಗುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಕೆಲವು ಕಡೆಗಳಲ್ಲಿ ನೀರು ಸರಬರಾಜು ಆಗದೇ ಇರುವುದರ ಜೊತೆಗೆ ಪೈಪ್ ಲೈನ್ ದುರಸ್ತಿ ಆಗಿಲ್ಲ, ಓಎಚ್‌ಟಿ ಟ್ಯಾಂಕ್ ನಿರ್ಮಾಣ ಪೂರ್ಣಗೊಂಡಿಲ್ಲ ಎಂಬ ಸಮಸ್ಯೆಗಳು ಕೇಳಿ ಬಂದವು. ಇದಕ್ಕೆ ಪ್ರತಿಕ್ರಿಯಿಸಿದ ಶಾಸಕ ಲಮಾಣಿ, "ನೀರು ಸರಬರಾಜು ಮಾಡದೇ ಇದ್ದರೆ ಬಿಲ್ ಹೇಗೆ?" ಎಂದು ಪ್ರಶ್ನಿಸಿದರು. ಜೆಜೆಎಂ ಯೋಜನೆಯಡಿ ಹಲವಾರು ಗ್ರಾಮಗಳಲ್ಲಿ ಕಾಮಗಾರಿ ಅಪೂರ್ಣವಾಗಿರುವುದರ ಮೇಲೂ ಅಸಮಾಧಾನ ವ್ಯಕ್ತಪಡಿಸಿದ ಅವರು, ರಣತೂರ ಗ್ರಾಮದಲ್ಲಿ ಕಾಮಗಾರಿ ಪೂರ್ಣಗೊಳ್ಳದಿದ್ದರೂ ಹ್ಯಾಂಡ್‌ಓವರ್ ಮಾಡಿರುವ ಕುರಿತು ತನಿಖೆ ನಡೆಸಲು ಸೂಚಿಸಿದರು. ಜಿಲ್ಲಾ ಮಟ್ಟದ ಸಭೆಯಲ್ಲಿ ನೀಡುವ ಮಾಹಿತಿ ಹಾಗೂ ನೆಲದ ವಾಸ್ತವ್ಯದ ನಡುವಿನ ವ್ಯತ್ಯಾಸವನ್ನು ಪ್ರಶ್ನಿಸಿ, ಮುಂದಿನ ಸಭೆಯಲ್ಲಿ ಸ್ಪಷ್ಟನೆ ನೀಡಬೇಕೆಂದು ತಾಪಂ ಇಓಗಳಿಗೆ ತಿಳಿಸಿದರು.

> "ನೀರು ಸರಬರಾಜು ಮಾಡದೇ ಇದ್ದರೆ ಬಿಲ್ ಹೇಗೆ? ಸಮಸ್ಯೆಗೊಳಗಾದ ಗ್ರಾಮಗಳಿಗೆ ತಕ್ಷಣ ಭೇಟಿ ನೀಡಿ ಕ್ರಮ ಕೈಗೊಳ್ಳಬೇಕು."
>
> **– ಡಾ. ಚಂದ್ರು ಲಮಾಣಿ, ಶಾಸಕ.**

ಯಳವತ್ತಿ, ಯತ್ನಳ್ಳಿ, ಮಾಡಳ್ಳಿ, ರಣತೂರ, ಜಲ್ಲಿಗೇರಿ ಸೇರಿದಂತೆ ಸಮಸ್ಯೆಗೊಳಗಾದ ಗ್ರಾಮಗಳಿಗೆ 2–3 ದಿನಗಳಲ್ಲಿ ಭೇಟಿ ನೀಡಿ ಪರಿಶೀಲಿಸಿ ತಕ್ಷಣ ಕ್ರಮ ಕೈಗೊಳ್ಳುವಂತೆ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಶಿರಹಟ್ಟಿ ತಹಸೀಲ್ದಾರ್ ಕೆ. ರಾಘವೇಂದ್ರ ರಾವ್, ಲಕ್ಷ್ಮೇಶ್ವರ ತಹಸೀಲ್ದಾರ್ ಧನಂಜಯ ಎಂ., ಮುಂಡರಗಿ ತಹಸೀಲ್ದಾರ್ ಎರಿಸ್ವಾಮಿ ಪಿ.ಎಸ್., ಶಿರಹಟ್ಟಿ ತಾಪಂ ಇಓ ಆರ್.ವಿ. ದೊಡ್ಡಮನಿ, ಲಕ್ಷ್ಮೇಶ್ವರ ತಾಪಂ ಇಓ ಕೃಷ್ಣಪ್ಪ ಧರ್ಮರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

### ಎಪ್ರಿಲ್ 17ರೊಳಗೆ ರಸ್ತೆ, ಚರಂಡಿ ಸ್ವಚ್ಛಗೊಳಿಸಲು ಗಡುವು; ಅಧಿಕಾರಿಗಳಿಗೆ ಸೂಚನೆ

# ಸ್ವಚ್ಛತೆ ನಿರ್ಲಕ್ಷ್ಯಕ್ಕೆ ಕಟ್ಟುನಿಟ್ಟಿನ ಎಚ್ಚರಿಕೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

"ಗಬ್ಬೆದ್ದು ನಾರುತ್ತಿರುವ ಲಕ್ಷ್ಮೇಶ್ವರ..." ಕುರಿತು ಪಟ್ಟಣದ ಪುರಸಭೆಯಲ್ಲಿ ನಡೆದ ಸಭೆಯಲ್ಲಿ ಜಿಲ್ಲಾ ಉಪವಿಭಾಗಾಧಿಕಾರಿ ಗಂಗಪ್ಪ ಎಂ ಅವರು ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಕಾರ್ಯವೈಖರಿಯ ಮೇಲೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಎಪ್ರಿಲ್ 17ರೊಳಗೆ ಪಟ್ಟಣದ ಮುಖ್ಯ ರಸ್ತೆ ಹಾಗೂ ಚರಂಡಿಗಳು ಸಂಪೂರ್ಣ ಸ್ವಚ್ಛವಾಗಬೇಕು, ಇಲ್ಲವಾದರೆ ಕ್ರಮ ಕೈಗೊಳ್ಳಲಾಗುವುದು ಎಂದು ಗಡುವು ನೀಡಿದರು.

ಸಭೆಯಲ್ಲಿ ಸ್ವಚ್ಛತಾ ಸಮಸ್ಯೆಗೆ ಪೌರ ಕಾರ್ಮಿಕರ ಕೊರತೆಯೇ ಪ್ರಮುಖ ಕಾರಣವೆಂದು ಹಿರಿಯ ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್ ವಿವರಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಗಂಗಪ್ಪ ಎಂ, ಪೌರ ಕಾರ್ಮಿಕರು "ಸ್ವಚ್ಛತೆಯ ಸೇನಾನಿಗಳು" ಆಗಿದ್ದು, ತಮ್ಮ ಕರ್ತವ್ಯವನ್ನು ಪ್ರಾಮಾಣಿಕತೆಯಿಂದ ನಿರ್ವಹಿಸಬೇಕು ಎಂದು ಹೇಳಿದರು. ಅಧಿಕಾರಿಗಳು ಹಾಗೂ ಸಿಬ್ಬಂದಿ ಪರಸ್ಪರ ಸಮನ್ವಯತೆ ಮತ್ತು ಜವಾಬ್ದಾರಿಯೊಂದಿಗೆ ಕೆಲಸ ಮಾಡಬೇಕು ಎಂದು ಸೂಚಿಸಿದರು.

ಲಕ್ಷ್ಮೇಶ್ವರ ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನ, ದೂದನಾನಾ ದರ್ಗಾ, ಮುಕ್ತಿಮಂದಿರ ಧರ್ಮಕ್ಷೇತ್ರಗಳಿಗೆ ರಾಜ್ಯದ ವಿವಿಧ ಭಾಗಗಳಿಂದ ಭಕ್ತರು ಭೇಟಿ ನೀಡುತ್ತಾರೆ. ಧಾರ್ಮಿಕ, ಸಾಂಸ್ಕೃತಿಕ ಹಾಗೂ ಶಿಕ್ಷಣ ಕೇಂದ್ರವಾಗಿರುವ ಪಟ್ಟಣದ ಸ್ವಚ್ಛತೆ ಕಾಪಾಡುವುದು ಪುರಸಭೆಯ ಪ್ರಮುಖ ಹೊಣೆಗಾರಿಕೆ ಎಂದು ಅವರು ಹೇಳಿದರು.

ಸ್ವಚ್ಛತಾ ಕಾರ್ಯವನ್ನು ಪರಿಣಾಮಕಾರಿಯಾಗಿ ನಡೆಸಲು ಮನೆಮನೆ ಕಸ ಸಂಗ್ರಹ ವ್ಯವಸ್ಥೆಯನ್ನು ಬಲಪಡಿಸಬೇಕು. ನಾಗರಿಕರು ಹಾಗೂ ವ್ಯಾಪಾರಸ್ಥರು ರಸ್ತೆ ಮತ್ತು ಚರಂಡಿಗಳಿಗೆ ಕಸ ಹಾಕದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು.

> "ಲಕ್ಷ್ಮೇಶ್ವರ ಸ್ವಚ್ಛಗೊಳಿಸಿ, ಇಲ್ಲದಿದ್ದರೆ ನನ್ನ ಪೆನ್ನು ಮಾತಾಡುತ್ತದೆ. ನಿರ್ಲಕ್ಷ್ಯಕ್ಕೆ ಅವಕಾಶ ಇಲ್ಲ."
>
> **– ಗಂಗಪ್ಪ ಎಂ, ಉಪವಿಭಾಗಾಧಿಕಾರಿ.**

ಖಾಲಿ ನಿವೇಶನಗಳ ಸ್ವಚ್ಛತೆ ಕುರಿತು ಮಾಲೀಕರಿಗೆ ಸೂಚನೆ ನೀಡಿ, ಪಾಲಿಸದಿದ್ದರೆ ಪುರಸಭೆಯಿಂದ ಸ್ವಚ್ಛಗೊಳಿಸಿ ವೆಚ್ಚವನ್ನು ಆಸ್ತಿಗೆ ಭಾರ ಹಾಕಬೇಕು ಎಂದು ನಿರ್ದೇಶಿಸಿದರು.

ಪೌರ ಕಾರ್ಮಿಕರ ಹಾಜರಾತಿಯನ್ನು ಬಯೋಮೆಟ್ರಿಕ್ ಮೂಲಕ ಪರಿಶೀಲಿಸಿ, ಅವರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಸೂಚಿಸಿದರು. ಜೊತೆಗೆ, ವಿಶ್ರಾಂತಿ ಗೃಹ ನಿರ್ಮಾಣ ಕಾಮಗಾರಿ ತಕ್ಷಣ ಆರಂಭಿಸಲು ಹಾಗೂ ಹೆಚ್ಚುವರಿ ಕಾರ್ಮಿಕರ ನೇಮಕ ಕುರಿತು ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸುವುದಾಗಿ ತಿಳಿಸಿದರು.

ಎಪ್ರಿಲ್ 17ರಂದು ವಾರ್ಡ್‌ಗಳ ಅನಿರೀಕ್ಷಿತವಾಗಿ ಭೇಟಿ ನೀಡಿ ಪರಿಶೀಲನೆ ನಡೆಸುವುದಾಗಿ ತಿಳಿಸಿದ ಅವರು, ನಿರ್ಲಕ್ಷ್ಯ ತೋರಿದರೆ ಕಠಿಣ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದರು.

ಸಭೆಯಲ್ಲಿ ತಹಸೀಲ್ದಾರ ಧನಂಜಯ ಎಂ, ಮುಖ್ಯಾಧಿಕಾರಿ ಮಾಂತೇಶ ಬೀಳಗಿ ಸೇರಿದಂತೆ ಸಿಬ್ಬಂದಿ ಹಾಗೂ ಪೌರ ಕಾರ್ಮಿಕರು ಉಪಸ್ಥಿತರಿದ್ದರು.

## ಇಂದು ರಕ್ತದಾನ ಶಿಬಿರ

**■ವಿಜಯಸಾಕ್ಷಿ ಸುದ್ದಿ, ಗದಗ**

ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನರಾಮ್ ಅವರ ಜಯಂತಿ ಪ್ರಯುಕ್ತ ಎಪ್ರಿಲ್ 8, 2026 ರಂದು ಬೆಳಿಗ್ಗೆ 10.30 ಗಂಟೆಗೆ ಗದಗ ಜಿಲ್ಲಾಡಳಿತ ಭವನದ ಅಡಿಟೋರಿಯಮ್ ಹಾಲ್‌ನಲ್ಲಿ ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ಈ ಶಿಬಿರದಲ್ಲಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತ ಸಮುದಾಯಗಳ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಆಹ್ವಾನ ನೀಡಲಾಗಿದೆ.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಡಾ. ಶ್ರೀಮತಿ ನಂದಾ ಹಣಬರಟ್ಟಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದು, ಮಾನವೀಯ ಸೇವೆಯ ಭಾಗವಾಗಿ ರಕ್ತದಾನ ಶಿಬಿರದಲ್ಲಿ ಎಲ್ಲರೂ ಸಕ್ರಿಯವಾಗಿ ಪಾಲ್ಗೊಳ್ಳಬೇಕೆಂದು ಮನವಿ ಮಾಡಿದ್ದಾರೆ.

## ಇಂದು ಪೂರ್ವಭಾವಿ ಸಭೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಆದೇಶದನ್ವಯ ಎಪ್ರಿಲ್ 20 ರಂದು ಆಚರಿಸಲಿರುವ ಕರ್ನಾಟಕದ ಸಾಂಸ್ಕೃತಿಕ ನಾಯಕ ಜಗಜ್ಯೋತಿ ಶ್ರೀ ಬಸವೇಶ್ವರರ ಜಯಂತಿ ಪ್ರಯುಕ್ತ ಎಪ್ರಿಲ್ 8, ಬುಧವಾರ ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ.

ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಈ ಸಭೆಗೆ ಸಂಬಂಧಿತ ಇಲಾಖೆಗಳ ಅಧಿಕಾರಿಗಳು, ಸಂಘಟನೆಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಹಾಜರಾಗಿ ಸಲಹೆ ಮತ್ತು ಅಭಿಪ್ರಾಯಗಳನ್ನು ನೀಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕೈಮಗ್ಗ ತಂತ್ರಜ್ಞಾನ ಸಂಸ್ಥೆಯ ವಾರ್ಷಿಕೋತ್ಸವ ಸಂಭ್ರಮದಲ್ಲಿ ಕೆ.ಎಚ್ ಪಾಟೀಲ

# ಸ್ವ-ಉದ್ಯೋಗದತ್ತ ವಿದ್ಯಾರ್ಥಿಗಳು ಗಮನಹರಿಸಲಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಶಿಕ್ಷಣದ ಜೊತೆ-ಗೆ ಕೌಶಲ್ಯಾಭಿವೃದ್ಧಿ, ವಿನ್ಯಾಸ ಚಿಂತನೆ ಮತ್ತು ಸ್ವಉದ್ಯೋಗದತ್ತ ವಿದ್ಯಾರ್ಥಿಗಳು ಗಮನಹರಿಸಿದರೆ ಭವಿಷ್ಯದಲ್ಲಿ ಉತ್ತಮ ಸಾಧನೆ ಸಾಧ್ಯವಾಗುತ್ತದೆ ಎಂದು ಜಿ.ಎನ್.ಟಿ.ಟಿ.ಎಫ್ ಅಧ್ಯಕ್ಷರಾದ ಕೆ.ಹೆಚ್. ಪಾಟೀಲ್ ಹೇಳಿದರು.

ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ (ಗದಗ-ಬೆಟಗೇರಿ)ಯ 2025-26ನೇ ಸಾಲಿನ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಜ್ಯೋತಿ ಬೆಳಗಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಂಸ್ಥೆಯ ಜಂಟಿ ನಿರ್ದೇಶಕರು ಹಾಗೂ ಪ್ರಾಂಶುಪಾಲರಾದ ಶ್ರೀಮತಿ ಸುಮಲತ.ಡಿ. ಅವರು ವಾರ್ಷಿಕ ವರದಿ ವಾಚಿಸಿ, ಸಂಸ್ಥೆಯ ವಿವಿಧ ಕ್ಷೇತ್ರಗಳ ಸಾಧನೆಗಳನ್ನು ವಿವರಿಸಿದರು.

ಶೈಕ್ಷಣಿಕ, ಕ್ರೀಡೆ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಮೆರೆದ ವಿದ್ಯಾರ್ಥಿಗಳಿಗೆ ಮುಖ್ಯ ಅತಿಥಿಗಳು ಬಹುಮಾನ ಹಾಗೂ ಪ್ರಶಸ್ತಿಗಳನ್ನು ವಿತರಿಸಿದರು. ನಂತರ ನಡೆದ ಸಾಂಸ್ಕೃತಿಕ ಕಾರ್ಯಕ್ರಮಗಳು ಪ್ರೇಕ್ಷಕರನ್ನು ಮಂತ್ರಮುಗ್ಧಗೊಳಿಸಿತು. ವಿದ್ಯಾರ್ಥಿಗಳು ಪ್ರದರ್ಶಿಸಿದ ಜಾನಪದ ನೃತ್ಯ, ದೇಶಭಕ್ತಿ ಗೀತೆ ಹಾಗೂ ನಾಟಕಗಳು ಕಾರ್ಯಕ್ರಮಕ್ಕೆ ಮೆರುಗು ನೀಡಿದವು. ಈ ಸಂದರ್ಭದಲ್ಲಿ ಶ್ರೀಮತಿ ಅನುಪಮಾ ಹಿರೇಮಠ, ಉಪ ನಿರ್ದೇಶಕರು, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ, ಹುಬ್ಬಳ್ಳಿ, ಕುಮಾರಿ ರಕ್ಷಿತಾ ಮಾಲಿಪಾಟೀಲ್ (ವಿದ್ಯಾರ್ಥಿ ಕಾರ್ಯದರ್ಶಿ), ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಅಂಬೇಡ್ಕರ್-ಬಾಬು ಜಗಜೀವನರಾಮ್ ಜಯಂತಿ ಪೂರ್ವಸಿದ್ಧತಾ ಸಭೆಯಲ್ಲಿ ಡಿಸಿ

# ಜಯಂತಿ ಅರ್ಥಪೂರ್ಣವಾಗಿ ಆಚರಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನ ರಾಮ್ ಅವರ ಜಯಂತಿಯನ್ನು ಅರ್ಥಪೂರ್ಣವಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚಿಸಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಪೂರ್ವಸಿದ್ಧತಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಎಪ್ರಿಲ್ 14ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಜಯಂತಿ ಕಾರ್ಯಕ್ರಮದಲ್ಲಿ ಯಾವುದೇ ಲೋಪದೋಷಗಳಾಗದಂತೆ ನೋಡಿಕೊಳ್ಳಬೇಕು. ಎಲ್ಲಾ ಇಲಾಖೆಗಳ ಅಧಿಕಾರಿಗಳು ಕಡ್ಡಾಯವಾಗಿ ಹಾಜರಾಗಬೇಕು. ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ ಸಮಾಜದ ವಿದ್ಯಾರ್ಥಿಗಳನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಗುವುದು ಎಂದು ಹೇಳಿದರು.

ಕಾರ್ಯಕ್ರಮಕ್ಕೂ ಮುನ್ನ ನಗರಸಭೆ ಆವರಣದಿಂದ ಅಂಬೇಡ್ಕರ್ ಭವನದವರೆಗೆ ಮೆರವಣಿಗೆ ನಡೆಯಲಿದ್ದು, ಎನ್‌ಎಸ್‌ಎಸ್ ಹಾಗೂ ಎನ್‌ಸಿಸಿ ವಿದ್ಯಾರ್ಥಿಗಳು ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಬೇಕು ಎಂದು ಕರೆ ನೀಡಿದರು.

> "ಜಯಂತಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು."
>
> **– ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ.**

ಇದರ ಅಂಗವಾಗಿ ಎಪ್ರಿಲ್ 8ರಂದು ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ರಕ್ತದಾನ ಶಿಬಿರವೂ ಆಯೋಜಿಸಲಾಗಿದ್ದು, ಕಾರ್ಯಕ್ರಮ ಯಶಸ್ವಿಗೆ ಎಲ್ಲರೂ ಕೈಜೋಡಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಬ್ಯಾನರ್ ಅಳವಡಿಕೆ, ವಿದ್ಯುತ್ ವ್ಯವಸ್ಥೆ, ವೇದಿಕೆ ಅಲಂಕಾರ, ಉಪನ್ಯಾಸ ಕಾರ್ಯಕ್ರಮ, ಉಪಹಾರ, ಕಲಾತಂಡಗಳ ಆಯ್ಕೆ ಹಾಗೂ ಕುಡಿಯುವ ನೀರಿನ ವ್ಯವಸ್ಥೆಗಳ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ್ರ ಕೋಟೂರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಎಂ.ಎಂ. ತುಮರವಟ್ಟಿ, ▶▶2ನೇ ಪುಟಕ್ಕೆ

## ವಿಶ್ವರಂಗಭೂಮಿ ದಿನಾಚರಣೆ: ಕಲಾವಿದರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಇಲ್ಲಿನ ಶ್ರೀಕಾಳಿಕಾ ದೇವಿ ಸಮುದಾಯ ಭವನದಲ್ಲಿ ಕರ್ನಾಟಕ ನಾಟಕ ಅಕಾಡೆಮಿ, ಬೆಂಗಳೂರು ಹಾಗೂ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ (ರಿ), ಗದಗ ಇವರ ಸಹಯೋಗದಲ್ಲಿ ವಿಶ್ವರಂಗಭೂಮಿ ದಿನಾಚರಣೆ ಕಾರ್ಯಕ್ರಮವನ್ನು ಆಚರಿಸಲಾಯಿತು.


ಕಾರ್ಯಕ್ರಮದಲ್ಲಿ ಹಿರಿಯ ದೊಡ್ಡಾಟ ಕಲಾವಿದರಾದ ಪ್ರಕಾಶ ಬಡಿಗೇರ ಹಾಗೂ ಶ್ರೀಕ್ಷೇತ್ರ ವರವಿಯ ಮೌನೇಶ್ವರ ದೇವಸ್ಥಾನ ಮತ್ತು ಮಠದ ವಿಕಾಸ ಟ್ರಸ್ಟ್‌ನ ನೂತನ ಸದಸ್ಯರಾದ ಶ್ರೀಧರ ಕೊಣ್ಣೂರ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಹಿರಿಯ ರಂಗ ಕಲಾವಿದರಾದ ಪ್ರೊ. ಮುರಲೀಧರ ಸಂಕನೂರ, ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ರಾಜಗೋಪಾಲ ಕಡ್ಲಿಕೊಪ್ಪ, ಅಧ್ಯಾಪಕರಾದ ವಿಶ್ವನಾಥ ಯ. ಕಮ್ಮಾರ ಉಪಸ್ಥಿತರಿದ್ದರು.

ಇದಲ್ಲದೆ ರಂಗ ನಿರ್ದೇಶಕರಾದ ಫಣೀಂದ್ರಚಾರ್ಯ ದ್ಯಾಮೇನಹಳ್ಳಿ, ರಂಗ ಕಲಾವಿದರಾದ ವಿಜಯಕುಮಾರ ಜಿತೂರಿ, ಚಿನ್ಮಯ ಸಾಂಸ್ಕೃತಿಕ ಅಕಾಡೆಮಿಯ ಅಧ್ಯಕ್ಷರಾದ ಮೌನೇಶ ಸಿ. ಬಡಿಗೇರ (ನರೇಗಲ್ಲ) ಸೇರಿದಂತೆ ಅನೇಕ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಎ. 10ರಂದು ರಂಗಕಲಾವಿದರ ಛಾಯಾಚಿತ್ರ-ಲೇಖನಗಳ 82ನೇ ಪ್ರದರ್ಶನ







ಸಂಪತ್ತಿಗೆ ಸವಾಲ್ ನಾಟಕದ ದೃಶ್ಯ : ಶಂಕರ ಕರ್ಜಗಿ, ಎಂ ಎಸ್ ಕೊಟ್ರೇಶ್, ಗೋಹಾರ್ಜನ್ ಹುಬ್ಬಳ್ಳಿ, ಬಸಣ್ಣ ಕಾಕನೂರ, ಬಸವರಾಜ್ ಟಿ ಹೊಸಮನಿ, ರಾಜಾರಾಮ್ ಕಿತ್ತೂರ, ಬಸವರಾಜ ಪಸಾರದ, ನಾಗರತ್ನಮ್ಮ ಹೊಸಮನಿ



'ಚವತಿ ಚಂದ್ರ' ನಾಟಕ – ಶ್ರೀ ದತ್ತಾತ್ರೇಯ ಸಂಗೀತ ನಾಟಕ ಮಂಡಳಿ, ಗದಗ (೧೯೧೬)

■ವಿಜಯಸಾಕ್ಷಿ ಸುದ್ದಿ, ದಾವಣಗೆರೆ

ದಾವಣಗೆರೆಯಲ್ಲಿ 2026ರ ರಾಷ್ಟ್ರೀಯ ರಂಗೋತ್ಸವದ ಅಂಗವಾಗಿ ಎಪ್ರಿಲ್ 10ರಂದು ರಂಗಕಲಾವಿದರ ಛಾಯಾಚಿತ್ರಗಳು ಹಾಗೂ ಹಳೆಯ ಲೇಖನಗಳ 82ನೇ ವಿಶೇಷ ಪ್ರದರ್ಶನ ಆಯೋಜಿಸಲಾಗಿದೆ.

ವೃತ್ತಿ ರಂಗಭೂಮಿ ರಂಗಾಯಣದ ಆಶ್ರಯದಲ್ಲಿ ಎಪ್ರಿಲ್ 10ರಿಂದ 14ರವರೆಗೆ ದೃಶ್ಯಕಲಾ ಮಹಾವಿದ್ಯಾಲಯ ಫೈನ್ ಆರ್ಟ್ಸ್ ಕಾಲೇಜು ಬಯಲು ರಂಗಮಂದಿರದಲ್ಲಿ ರಾಷ್ಟ್ರೀಯ ರಂಗೋತ್ಸವ ನಡೆಯಲಿದ್ದು, ಕನ್ನಡ, ತೆಲುಗು, ತಮಿಳು, ಮರಾಠಿ ಹಾಗೂ ಮಲಯಾಳಂ ನಾಟಕಗಳ ಪ್ರದರ್ಶನ, ರಂಗನೃತ್ಯ, ರಂಗಗೀತೆಗಳು ಸೇರಿದಂತೆ ವೈವಿಧ್ಯಮಯ ಕಾರ್ಯಕ್ರಮಗಳು ಜರುಗಲಿವೆ.

ಈ ಬಾರಿ ವಿಶೇಷ ಆಕರ್ಷಣೆಯಾಗಿ, ಗದುಗಿನ ಪ್ರಸಿದ್ಧ ಚಿತ್ರಕಲಾವಿದ ಶಂಕರಗೌಡ ಪಾಟೀಲ ಅವರು ಸಂಗ್ರಹಿಸಿರುವ ನಾಡಿನ ರಂಗಕಲಾವಿದರ ಅಪರೂಪದ ಛಾಯಾಚಿತ್ರಗಳು ಹಾಗೂ ವಿವಿಧ ಪತ್ರಿಕೆಗಳಲ್ಲಿ ಪ್ರಕಟವಾದ ಹಳೆಯ ಲೇಖನಗಳ 82ನೇ ಪ್ರದರ್ಶನವು ಕಲಾಭಿಮಾನಿಗಳಿಗೆ ಅನನ್ಯ ಅನುಭವ ನೀಡಲಿದೆ.

ಎಪ್ರಿಲ್ 10ರಂದು ನಡೆಯುವ ಈ ಪ್ರದರ್ಶನವನ್ನು ನಾಡೋಜ ಪ್ರೊ. ಬರಗೂರು ರಾಮಚಂದ್ರಪ್ಪ ಅವರು ಉದ್ಘಾಟಿಸಲಿದ್ದು, ವೃತ್ತಿ ರಂಗಭೂಮಿ ರಂಗಾಯಣದ ನಿರ್ದೇಶಕರಾದ ಮಲ್ಲಿಕಾರ್ಜುನ ಕಡಕೋಳ ಅಧ್ಯಕ್ಷತೆ ವಹಿಸಲಿದ್ದಾರೆ. ಇದೇ ಸಂದರ್ಭದಲ್ಲಿ 'ನೆನಪು' ಸ್ಮರಣ ಸಂಚಿಕೆಯನ್ನು ಡಾ. ರವಿಕಾಂತೇಗೌಡ ಅವರು ಬಿಡುಗಡೆ ಮಾಡಲಿದ್ದಾರೆ.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯದರ್ಶಿ ಜೆ. ಮಂಜುನಾಥ (ಐಎಎಸ್) ಬಹುಮಾನ ವಿತರಣೆ ಮಾಡಲಿದ್ದು, 'ಪದ್ಮಶ್ರೀ' ಪ್ರಶಸ್ತಿ ಪುರಸ್ಕೃತ ಡಾ. ಸುರೇಶ ಹನಗವಾಡಿ, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ಹಾಗೂ ಡಾ. ಬಿ.ಎಸ್. ಮಂಜುನಾಥಸ್ವಾಮಿ ಪ್ರಮುಖ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದ ನಿರ್ವಹಣೆಯನ್ನು ವೃತ್ತಿ ರಂಗಭೂಮಿ ರಂಗಾಯಣದ ವಿಶೇಷಾಧಿಕಾರಿ ರವಿಚಂದ್ರ ನಡೆಸಿಕೊಡಲಿದ್ದಾರೆ.

## ಜಯಂತಿ ಅರ್ಥಪೂರ್ಣವಾಗಿ ಆಚರಿಸಿ

▶▶ಮೊದಲನೇ ಪುಟದಿಂದ

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿ ಅಮಿತ ಬಿದರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಶ್ರೀಮತಿ ಪದ್ಮಾವತಿ ಜಿ., ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮಸನಾಯಕ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್. ಎಸ್. ಬುರುಡಿ, ಡಿಡಿಎಲ್‌ಆರ್ ರುದ್ರಣ್ಣಗೌಡ್ರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಶಂಕರಾಚಾರ್ಯ-ಭಗೀರಥ ಜಯಂತಿ: ನಾಳೆ ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಈ ವರ್ಷ ಆಚರಿಸಲಿರುವ ಜಗದ್ಗುರು ಶ್ರೀ ಶಂಕರಾಚಾರ್ಯರ ಜಯಂತಿ (ಎಪ್ರಿಲ್ 21) ಹಾಗೂ ಶ್ರೀ ಭಗೀರಥ ಜಯಂತಿ (ಎಪ್ರಿಲ್ 23) ಪ್ರಯುಕ್ತ ಎಪ್ರಿಲ್ 9, 2026ರಂದು ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆಗಳು ನಡೆಯಲಿವೆ.

ಬೆಳಿಗ್ಗೆ 10.30 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಗದ್ಗುರು ಶ್ರೀ ಶಂಕರಾಚಾರ್ಯರ ಜಯಂತಿಗೆ ಸಂಬಂಧಿಸಿದ ಪೂರ್ವಭಾವಿ ಸಭೆ ನಡೆಯಲಿದ್ದು, ಅದೇ ದಿನ ಬೆಳಿಗ್ಗೆ 11.30 ಗಂಟೆಗೆ ಶ್ರೀ ಭಗೀರಥ ಜಯಂತಿ ಅಂಗವಾಗಿ ಮತ್ತೊಂದು ಪೂರ್ವಭಾವಿ ಸಭೆ ಆಯೋಜಿಸಲಾಗಿದೆ.

ಈ ಸಭೆಗಳಲ್ಲಿ ಸಂಬಂಧಿತ ಇಲಾಖೆ ಅಧಿಕಾರಿಗಳು, ಸಂಘಟನೆಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಸಲಹೆ ಮತ್ತು ಅಭಿಪ್ರಾಯಗಳನ್ನು ನೀಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲ್ಯಾಪ್‌ಟಾಪ್ ಯೋಜನೆಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದಿಂದ ಅನುಷ್ಠಾನಗೊಳ್ಳುತ್ತಿರುವ ಲ್ಯಾಪ್‌ಟಾಪ್ ಯೋಜನೆಯಡಿ ಉನ್ನತ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಿಸಲು ಆಫ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ಫಲಾನುಭವಿಗಳು ಈ ಯೋಜನೆಯ ಸದುಪಯೋಗ ಪಡೆಯಲು ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಎಪ್ರಿಲ್ 17 ಕೊನೆಯ ದಿನವಾಗಿದ್ದು, ಸಮಯ ಮೀರಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲೆಯ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಉದ್ಯೋಗ ಮೇಳ ಸದುಪಯೋಗ ಪಡೆದುಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಡಂಬಳ



ಮಹಿಳಾ ಸಬಲೀಕರಣ ಹೆಚ್ಚಿಸುವ ನಿಟ್ಟಿನಲ್ಲಿ ಸ್ವಸಹಾಯ ಗುಂಪುಗಳು ತಯಾರಿಸಿದ ಉತ್ಪನ್ನಗಳನ್ನು ಮಾರಾಟ ಮಾಡಲು ನೆರವಾಗುವಂತೆ ಎ.9ರಂದು ಸ್ವಯಂ ಉದ್ಯೋಗ ತರಬೇತಿ ಹಾಗೂ ಎ. 10 ರಂದು ಉದ್ಯೋಗ ಕ್ರಾಂತಿ ಮೇಳವನ್ನು ಜನಪ್ರಿಯ ಶಾಸಕರಾದ ಜಿ.ಎಸ್. ಪಾಟೀಲರ ಹುಟ್ಟುಹಬ್ಬದ ನಿಮಿತ್ತ ಹಮ್ಮಿಕೊಳ್ಳಲಾಗಿದ್ದು ಡಂಬಳ ಹೋಬಳಿಯ ಗ್ರಾಮಸ್ಥರು ಇದನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಯುವ ನೇತಾರ ಬಸವರಡ್ಡಿ ಬಂಡಿಹಾಳ ಹೇಳಿದರು.

ಡಂಬಳ ಗ್ರಾಮದ ಪ್ರವಾಸಿ ಮಂದಿರದಲ್ಲಿ ಪತ್ರಿಕಾ ಪ್ರಕಟಣೆಗೆ ನೀಡಿ ಮಾತನಾಡಿದ ಅವರು, ಪಟ್ಟಣದ ರಾಜೀವ ಗಾಂಧಿ ಆಯುರ್ವೇದಿಕ ಮೆಡಿಕಲ್ ಕಾಲೇಜಿನಲ್ಲಿ ಜನಪ್ರಿಯ ಶಾಸಕರಾದ ಜಿ.ಎಸ್. ಪಾಟೀಲರ ಜನ್ಮದಿನದ ಅಂಗವಾಗಿ ಕುಟುಂಬ ವರ್ಗದವರು, ಅಭಿಮಾನಿಗಳು, ಕಾರ್ಯಕರ್ತರು ಉದ್ಯೋಗ ಕ್ರಾಂತಿ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ ಎಂದರು. ಮಹಿಳೆಯರಿಗೆ ಸ್ವಯಂ ಉದ್ಯೋಗ ಕಲ್ಪಿಸುವಲ್ಲಿ ಎ. 9ರಂದು ಸ್ವಯಂ ಉದ್ಯೋಗ ತರಬೇತಿ ಜರುಗಲಿದ್ದು, ಅಂದು ನಟಿ ಕಾರುಣ್ಯ ರಾಮ್ ಆಗಮಿಸಲಿದ್ದಾರೆ. ಗ್ರಾಮೀಣ ಮತ್ತು ನಗರ ಪ್ರದೇಶದ ಮಹಿಳೆಯರು ಮನೆಯಲ್ಲಿ ಕುಳಿತು ಉದ್ಯೋಗ ಮಾಡುವಂತಾಗಲಿ ಎಂಬ ಮಹದಾಸೆಯಿಂದ ವರ್ಕ್ ಫ್ರಂ ಹೋಂ ನೀಡುವ ಹೆಚ್ಚು ಕಂಪನಿಗಳನ್ನೇ ಉದ್ಯೋಗ ಕ್ರಾಂತಿಗೆ ಆಹ್ವಾನಿಸಲಾಗಿದೆ. ಎ.10ರಂದು ಉದ್ಯೋಗ ಕ್ರಾಂತಿ ಕಾರ್ಯಕ್ರಮ ಹಮ್ಮಿಕೊಂಡಿದ್ದು ನೂರಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸಲಿವೆ ಎಂದು ತಿಳಿಸಿದರು.

ಈ ಉದ್ಯೋಗ ಮೇಳದಲ್ಲಿ ಮಹಿಳೆಯರು ತಾವಿದ್ದ ಸ್ಥಳದಿಂದಲೇ ಕೆಲಸ ಮಾಡಿಕೊಡಲು ಅನುಕೂಲ ಕಲ್ಪಿಸಿಕೊಡಬೇಕು ಎನ್ನುವ ನಿಟ್ಟಿನಲ್ಲಿ ವಿವಿಧ ಸ್ವಸಹಾಯ ಸಂಘಗಳು ಉತ್ಪಾದಿಸುವ ರೊಟ್ಟಿ, ಸಂಡಿಗೆ, ಹಪ್ಪಳ, ಚಟ್ನಿ ಹೀಗೆ ಸ್ಥಳೀಯವಾಗಿ ತಯಾರಿಸುವ ಪದಾರ್ಥಗಳನ್ನು ಮಾರ್ಕೆಟಿಂಗ್ ಮಾಡಲು ಸ್ವಸಹಾಯ ಸಂಘಗಳಿಗೆ ನೆರವಾಗಲಿವೆ. ಹೀಗಾಗಿ ಇದಕ್ಕೆ ಉದ್ಯೋಗ ಕ್ರಾಂತಿ ಎಂದು ಹೆಸರಿಡಲಾಗಿದೆ. ಮುಂಡರಗಿ ಮತ್ತು ಡಂಬಳ ಹೋಬಳಿಯ ಯುವಕ-ಯುವತಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು.

## ಎ.12ರಿಂದ ಶಾಲಾ ಮಕ್ಕಳಿಗಾಗಿ ಸಂಸ್ಕೃತಿ-ಸಂಸ್ಕಾರ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ಎಸ್.ವಾಯ್.ಬಿ.ಎಂ.ಎಸ್. ಯೋಗ ಪಾಠಶಾಲೆ, ಗದಗ ಮತ್ತು ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾಮಹೋತ್ಸವ ಸಮಿತಿ-2026, ಗದಗ ಇವರ ಸಹಯೋಗದಲ್ಲಿ ಬೇಸಿಗೆ ರಜೆ ಪ್ರಯುಕ್ತವಾಗಿ 21ನೇ ಸಂಸ್ಕೃತಿ-ಸಂಸ್ಕಾರ ಶಿಬಿರ ಆಯೋಜಿಸಲಾಗಿದೆ. ಶಿಬಿರವು ದಿ.12-4-2026 ರಿಂದ 10 ದಿನಗಳ ಕಾಲ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರ (ಬಸವೇಶ್ವರ ಶಾಲಾ ಆವರಣ)ದಲ್ಲಿ ಪ್ರತಿದಿನ ಬೆಳಿಗ್ಗೆ 6-30 ರಿಂದ 10-30 ಗಂಟೆಯವರೆಗೆ ನಡೆಯುವುದು.

ಶಿಬಿರದಲ್ಲಿ ಆರೋಗ್ಯ ಭಾಗ್ಯಕ್ಕೆ ನಿತ್ಯ ಯೋಗಾಭ್ಯಾಸ, ದೈಹಿಕ ಸದೃಢತೆಗಾಗಿ ಭಾರತೀಯ ಕ್ರೀಡೆಗಳು, ಮನೋ-ಆನಂದಕ್ಕಾಗಿ ಸಂಗೀತ / ನೃತ್ಯ / ಮೋಜಿನ ಆಟಗಳು, ವ್ಯಕ್ತಿತ್ವ ವಿಕಸನಕ್ಕಾಗಿ ತಜ್ಞರಿಂದ ಉಪನ್ಯಾಸಗಳು, ಪರಿವರ್ತನೆಗಾಗಿ ಜಾಣ್ಮೆ ಪರೀಕ್ಷೆ / ಪರಿಸರ ಪ್ರೇಕ್ಷಾ ಪ್ರವಾಸ, ವಿಷಯಗಳ ಬೌದ್ಧಿಕ ಮತ್ತು ಪ್ರಾಯೋಗಿಕವಾಗಿ ತರಬೇತಿ ನೀಡಲಾಗುವುದು. ಶಿಬಿರದಲ್ಲಿ 5 ರಿಂದ 10ನೇ ತರಗತಿವರೆಗಿನ ಬಾಲಕ / ಬಾಲಕಿಯರು ಭಾಗವಹಿಸಲು ಅವಕಾಶವಿದ್ದು, ಪ್ರವೇಶ ಉಚಿತವಾಗಿರಲಿದೆ. ಭಾಗವಹಿಸಲಿರುವ ಆಸಕ್ತ ವಿದ್ಯಾರ್ಥಿಗಳು ದಿನಾಂಕ 12-04-2026 ರವಿವಾರ ಬೆಳಿಗ್ಗೆ 8-30 ಗಂಟೆಗೆ ಜರುಗಲಿರುವ ಶಿಬಿರ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಉಪಸ್ಥಿತರಿರಬೇಕೆಂದು ಶಿಬಿರ ಸಂಯೋಜಕರಾದ ಕೆ.ಎಸ್. ಪಲ್ಲೇದ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ - 9448317188 ಸಂಪರ್ಕಿಸಬಹುದಾಗಿದೆ.

## ರಾಷ್ಟ್ರಕ್ಕಾಗಿ ಬದುಕು ಸಮರ್ಪಣೆ ಅಗತ್ಯ

**ಬಿಜೆಪಿ ಸಂಸ್ಥಾಪನಾ ದಿನಾಚರಣೆ ಸಂಭ್ರಮಾಚರಣೆಯಲ್ಲಿ ಮಂಜುನಾಥ ಹಿರೇಮಠ**




■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

"ಈ ದೇಶ ನನಗೆ ಏನು ಕೊಟ್ಟಿದೆ ಎನ್ನುವುದಕ್ಕಿಂತ, ದೇಶಕ್ಕೆ ನಾನು ಏನು ಕೊಟ್ಟಿದ್ದೇನೆ ಎಂಬ ಸ್ವಾಭಿಮಾನ ಬೇಕು" ಎಂದು ಬಿಜೆಪಿ ನಗರ ಘಟಕದ ಅಧ್ಯಕ್ಷ ಮಂಜುನಾಥ ಹಿರೇಮಠ ಹೇಳಿದರು.

ಪಟ್ಟಣದ ಪಕ್ಷದ ಕಚೇರಿಯಲ್ಲಿ ನಡೆದ ಬಿಜೆಪಿ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಅವರು, ಪಕ್ಷದ ಎಲ್ಲಾ ಕಾರ್ಯಕರ್ತರು, ನಾಯಕರು ಹಾಗೂ ಯುವ ಮುಖಂಡರಿಗೆ ಶುಭಾಶಯಗಳನ್ನು ತಿಳಿಸಿದರು.

ವ್ಯಕ್ತಿಗಿಂತ ಪಕ್ಷ ಮುಖ್ಯ, ಪಕ್ಷಕ್ಕಿಂತ ದೇಶ ಮುಖ್ಯ ಎಂಬ ಉನ್ನತ ಧ್ಯೇಯದೊಂದಿಗೆ ಲಕ್ಷಾಂತರ ಕಾರ್ಯಕರ್ತರ ನಿಸ್ವಾರ್ಥ ಸೇವೆ ಮತ್ತು ಬಲಿದಾನದಿಂದ ಬಿಜೆಪಿ ಬೆಳೆದಿದೆ ಎಂದು ಹೇಳಿದರು. 'ಏಕಾತ್ಮ ಮಾನವತಾವಾದ', 'ಅಂತ್ಯೋದಯ', 'ಸಬ್ ಕಾ ಸಾಥ್, ಸಬ್ ಕಾ ವಿಕಾಸ್, ಸಬ್ ಕಾ ವಿಶ್ವಾಸ್' ತತ್ವಗಳೊಂದಿಗೆ ಬಿಜೆಪಿ ಮುಂದುವರಿದಿದ್ದು, ವಿಕಸಿತ ಭಾರತ ನಿರ್ಮಾಣಕ್ಕೆ ಕಾರ್ಯಕರ್ತರು ಬದ್ಧರಾಗಬೇಕು ಎಂದರು. "ಪಕ್ಷದ ಸಾಧನೆಗಳು ಮತ್ತು ಭವಿಷ್ಯದ ಯೋಜನೆಗಳ ಬಗ್ಗೆ ವಿವರಿಸಿ ಸಂಘಟನೆಯನ್ನು ಇನ್ನಷ್ಟು ಬಲಪಡಿಸುವ ಅಗತ್ಯವಿದೆ," ಎಂದು ಮಂಡಲ ಕಾರ್ಯದರ್ಶಿ ಕೋಗಳಿ ಹನುಮಂತಪ್ಪ ಹೇಳಿದರು.

"ಕಾರ್ಯಕರ್ತರು ಪಕ್ಷದ ಆದರ್ಶಗಳನ್ನು ಜನರಿಗೆ ತಲುಪಿಸುವಲ್ಲಿ ಸಕ್ರಿಯರಾಗಬೇಕು," ಎಂದು ಮಂಡಲ ಕಾರ್ಯದರ್ಶಿ ದಿವಾಕರ ಗೌಡ ಕರೆ ನೀಡಿದರು.

ಈ ವೇಳೆ ಅಟಲ್ ಬಿಹಾರಿ ವಾಜಪೇಯಿ, ಲಾಲ್ ಕೃಷ್ಣ ಅಡ್ವಾಣಿ, ನರೇಂದ್ರ ಮೋದಿ, ಮುರಳಿ ಮನೋಹರ್ ಜೋಶಿ ಸೇರಿದಂತೆ ಅನೇಕ ರಾಷ್ಟ್ರೀಯ ನಾಯಕರ ತ್ಯಾಗ, ಸೈದ್ಧಾಂತಿಕ ಅಡಿಪಾಯ ಮತ್ತು ಮಾರ್ಗದರ್ಶನವನ್ನು ಸ್ಮರಿಸಿದರು. ಕಾರ್ಯಕ್ರಮದಲ್ಲಿ ಮಂಡಲ ಯುವ ಮೋರ್ಚಾದ ಮಂಜುನಾಥ, ಮಾಲವಿ, ಉಪಾಧ್ಯಕ್ಷ ಮಲ್ಲಿಕಾರ್ಜುನ, ಎಸ್.ಸಿ. ಮೋರ್ಚಾ ಅಧ್ಯಕ್ಷ ಮರಿಯಪ್ಪ, ಚಿರು ಬೆಳ್ಳಕ್ಕಿ, ಪೂಜಾರ ರಾಮೇಶ್, ಸಂತೋಷ, ಬ್ಯಾಟಿ, ಮಂಜು, ಬಸವರಾಜ್ ಗೊಂಡಬಾಳು, ಅಶೋಕ್, ಬಸವಪ್ಪ ಸುರೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಅಯ್ಯಪ್ಪ ನಾಯ್ಕರ್ ಸಮಾಜಮುಖಿ ಕಾರ್ಯ ಶ್ಲಾಘನೀಯ

**ಶ್ರೀಮತಿ ಶಾರದಾ ಅಯ್ಯಪ್ಪ ನಾಯ್ಕರ್ ದಂಪತಿಗಳ 40ನೇ ಮದುವೆ ವಾರ್ಷಿಕೋತ್ಸವ**



■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಸಾಮಾಜಿಕ ಕಾರ್ಯಕರ್ತ, ಶ್ರಮಿಕರ ಧುರೀಣರ ಹಾಗೂ ಮಹರ್ಷಿ ವಾಲ್ಮೀಕಿ ಪರಿಶಿಷ್ಠ ಪಂಗಡದ ಬಾಲಕರ ಅನುದಾನಿತ ವಸತಿ ನಿಲಯದ ಅಧ್ಯಕ್ಷ ಅಯ್ಯಪ್ಪ ನಾಯ್ಕರ್ ಅವರ ಸಮಾಜಮುಖಿ ಕಾರ್ಯ ಶ್ಲಾಘನೀಯ ಎಂದು ಗದಗ ಮಾಜಿ ಶಾಸಕರೂ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ.ಆರ್.ಪಾಟೀಲ ಹೇಳಿದ್ದಾರೆ.

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಶ್ರೀಮತಿ ಶಾರದಾ ಅಯ್ಯಪ್ಪ ನಾಯ್ಕರ್ ದಂಪತಿಗಳ 40ನೇ ಮದುವೆ ವಾರ್ಷಿಕೋತ್ಸವದ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ನೋಟ್‌ಬುಕ್-ಪೆನ್ನು ವಿತರಣೆ, ಅನ್ನದಾಸೋಹ ಹಾಗೂ ಅಭಿನಂದನಾ ಸಮಾರಂಭದಲ್ಲಿ ಭಾಗಿಯಾಗಿ ಮಾತನಾಡಿದ ಅವರು, ಗದಗ ಎಪಿಎಂಸಿ ಮಾರುಕಟ್ಟೆಯಲ್ಲಿ ಶ್ರಮಿಕರಾಗಿ ಕಷ್ಟದ ಜೀವನ ನಡೆಸಿದ ಅಯ್ಯಪ್ಪ ನಾಯ್ಕರ್, ಕಾರ್ಮಿಕ ಮುಖಂಡರಾಗಿ, ಜನಮುಖಿ, ಸಮಾಜಮುಖಿ ಕಾರ್ಯಗಳಲ್ಲಿ ನಿಭಾಯಕರಾಗಿದ್ದಾರೆ. ಮಹರ್ಷಿ ವಾಲ್ಮೀಕಿ ಪರಿಶಿಷ್ಠ ಪಂಗಡದ ಬಾಲಕರ ಅನುದಾನಿತ ವಸತಿ ನಿಲಯವನ್ನು ಯಶಸ್ವಿಯಾಗಿ ಮುನ್ನಡೆಸಿರುವುದು ಅವರ ಶಿಕ್ಷಣಪ್ರೇಮವನ್ನು ಪ್ರತಿಬಿಂಬಿಸುತ್ತದೆ. ಇವರ ಜೊತೆಗೆ ಶ್ರೀಮತಿ ಶಾರದಾ ಅವರ ಪರಿಶ್ರಮವೂ ಗಮನಾರ್ಹವಾಗಿದೆ. ಇವರ ಸಮಾಜಮುಖಿ ಕಾರ್ಯಗಳು ಇನ್ನಷ್ಟು ವಿಸ್ತಾರಗೊಳ್ಳಲಿ ಎಂದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ನಗರ ಯೋಜನಾ ಪ್ರಾಧಿಕಾರದ ಮಾಜಿ ಅಧ್ಯಕ್ಷ ಗುರಣ್ಣ ಬಳಗಾನೂರ, ನಗರಸಭಾ ಸದಸ್ಯ ಎಲ್.ಡಿ.ಚಂದಾವರಿ, ನಿವೃತ್ತ ಪ್ರಾಚಾರ್ಯ ಆರ್.ಎಸ್.ಪೂಜಾರ, ವೀರೇಶ್ವರ ಪುಣ್ಯಾಶ್ರಮದ ವ್ಯವಸ್ಥಾಪಕ ಹೇಮರಾಜಶಾಸ್ತ್ರಿಗಳು, ಎಂ.ಜಿ.ಸತೋಜಿ, ಚನ್ನಬಸಪ್ಪ ಅಕ್ಕಿ, ಮಹಾಂತೇಶ ಮಾಡಳ್ಳಿ, ಎಸ್. ಎಂ.ಕದಡಿ, ಡಿ.ಎಸ್.ತಳವಾರ, ಇಮಾಮ್‌ಸಾಬ್ ರೋಣ, ರಾಜೇಸಾಬ್ ಕಣವಿ, ಬುಡ್ಡಾ ರೋಣ, ಮಾರುತಿ ವಾಲದೊಡ್ಡಿ, ರಾಮಚಂದ್ರ ಆಥೋನಿ, ಬಸವರಾಜ ಸೂಡಿ, ದೇವರಾಜ್, ಸತ್ಯನಾರಾಯಣರಾವ್ ಎಂ.ಪಿ, ಮಂಜುನಾಥ್, ಕೃಷ್ಣಾ, ಸುಜಾತಾ ನಾಯ್ಕರ್ ಮುಂತಾದವರು ಭಾಗವಹಿಸಿದ್ದರು.

# ಸಂಘಟಿತ ಸಮಾಜವೇ ಶಕ್ತಿಶಾಲಿ

**ಬಣಜಿಗ ಸಮಾಜದ ಸದಸ್ಯತ್ವ ನೋಂದಣಿ ಅಭಿಯಾನಕ್ಕೆ ಚಾಲನೆ**



ಸಭೆಯಲ್ಲಿ ಮಾತನಾಡಿದ ಅಧ್ಯಕ್ಷ ಅಂಗಡಿ ರಾಚಪ್ಪ ಅವರು, ಬಣಜಿಗ ಸಮಾಜದ ಅಭಿವೃದ್ಧಿ ಮತ್ತು ಬಲವರ್ಧನೆಗಾಗಿ ಪ್ರತಿಯೊಂದು ಕುಟುಂಬವೂ ಸದಸ್ಯತ್ವ ನೋಂದಣಿ ಮಾಡಿಸಿಕೊಳ್ಳುವುದು ಅತ್ಯಂತ ಅಗತ್ಯ. ಸಂಘಟಿತ ಸಮಾಜವೇ ಶಕ್ತಿಶಾಲಿ ಸಮಾಜವಾಗುತ್ತದೆ. ಸಮಾಜದ ಹಕ್ಕುಗಳು, ಅವಕಾಶಗಳು ಹಾಗೂ ಭವಿಷ್ಯದ ಯೋಜನೆಗಳನ್ನು ಸಾಧಿಸಲು ಸದಸ್ಯತ್ವವೇ ಮೂಲ ಅಡಿಪಾಯವಾಗಿದೆ ಎಂದು ಹೇಳಿದರು.

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದ ಹಳೆಯ ಊರಿನ ಶ್ರೀ ಕಲ್ಲೇಶ್ವರ ದೇವಸ್ಥಾನದಲ್ಲಿ ಬಣಜಿಗ ಸಮಾಜದ ಸಭೆ ಹಾಗೂ ತಾಲೂಕ ಮಟ್ಟದ ಸದಸ್ಯತ್ವ ನೋಂದಣಿ ಅಭಿಯಾನಕ್ಕೆ ಅಂಗಡಿ ರಾಚಪ್ಪ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಸಮಾಜದ ಪ್ರಮುಖರು ಭಾಗವಹಿಸಿ, ಸದಸ್ಯತ್ವ ನೋಂದಣಿ ಮೂಲಕ ಸಮಾಜದ ಏಕತೆ ಮತ್ತು ಬಲವರ್ಧನೆಗೆ ಒತ್ತು ನೀಡಿದರು.

ವಕೀಲರಾದ ಬಿ.ವಿ. ಶಿವಯೋಗಿ ಮಾತನಾಡಿ, ಈ ಅಭಿಯಾನವು ಕೇವಲ ನೋಂದಣಿಗೆ ಸೀಮಿತವಾಗದೇ ಸಮಾಜದ ಏಕತೆ, ಸಹಕಾರ ಮತ್ತು ಪ್ರಗತಿಯತ್ತ ಮಹತ್ವದ ಹೆಜ್ಜೆಯಾಗಿದೆ.

ಪ್ರತಿಯೊಬ್ಬರೂ ಜವಾಬ್ದಾರಿಯಿಂದ ಭಾಗವಹಿಸಿ ಸಮಾಜದ ಬಲವರ್ಧನೆಗೆ ಕೈಜೋಡಿಸಬೇಕು ಎಂದು ಹೇಳಿದರು.

ವಿಜಯ್ ಕುಮಾರ್ ಹಾಲ್ದಾಳ್ ಮಾತನಾಡಿ, ಸಮುದಾಯದ ಪ್ರತಿಯೊಂದು ಕುಟುಂಬವೂ ಸದಸ್ಯತ್ವ ನೋಂದಣಿ ಮಾಡಿಸಿಕೊಳ್ಳುವುದು ಎಲ್ಲರ ಜವಾಬ್ದಾರಿ ಆಗಿದ್ದು, ಇದನ್ನು ನಿರ್ಲಕ್ಷಿಸಬಾರದು ಎಂದು ತಿಳಿಸಿದರು.

ಸಮಾಜದ ಪ್ರಮುಖರಾದ ಪಟೇಲ್ ಮಂಜುನಾಥ, ಆರ್.ವಿ. ಚನ್ನಬಸಪ್ಪ, ಶಿವಕುಮಾರ್ ಬೆಲ್ಲದ್, ವಾಲಿ ಮಲ್ಲಿಕಾರ್ಜುನ, ಚಿನಿವಾಲರ ಕೊಟ್ರೇಶ್, ಹಿಮರಾಜ್, ರೊಟ್ಟಿ ಕೊಟ್ರಪ್ಪ, ಬಸವನಗೌಡ ಪಾಟೀಲ್, ಲೇಪಾಕ್ಷಿ, ಬಾವಿಹಳಿ ಅಂಬರೀಶಪ್ಪ, ಮೋರಗೇರಿ ಮಂಜುನಾಥ್, ಗದಿಗಿನ ಸುರೇಶ್ ಹಾಗೂ ಮಹಿಳಾ ಘಟಕ ತಾಲೂಕ ಅಧ್ಯಕ್ಷರಾದ ಕವಿತಾ ಹಾಲ್ದಾಳ್, ಶೋಭಾ, ಸುಧಾ, ಬಿ. ಶಿವಲೀಲಾ, ಕೆ. ಪ್ರೇಮಾ, ಪಂಕಜ, ಅಂಗಡಿ ಕೊಟ್ರಮ್ಮ ಉಪಸ್ಥಿತರಿದ್ದರು.

# ಜಿಲ್ಲಾ ಮಟ್ಟದ ಬೇಸಿಗೆ ಶಿಬಿರಕ್ಕೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ 2026-27ನೇ ಸಾಲಿನ ಜಿಲ್ಲಾ ಮಟ್ಟದ ಬೇಸಿಗೆ ಶಿಬಿರಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಶಿಬಿರದಲ್ಲಿ ಚಿತ್ರಕಲೆ, ಕರಕುಶಲ ಕಲೆ, ಜೇಡಿಮಣ್ಣಿನ ಕಲೆ, ಸಮೂಹ ನೃತ್ಯ, ಶಾಸ್ತ್ರೀಯ ಸಂಗೀತ, ಕರಾಟೆ, ಯೋಗ, ಕಸದಿಂದ ರಸ, ಜ್ಯುವಲೇರಿ ಮೆಕಿಂಗ್, ಮೆಹಂದಿ ಹಾಗೂ ಗ್ರಾಮೀಣ ಕ್ರೀಡೆಗಳು ಸೇರಿದಂತೆ ವಿವಿಧ ಸೃಜನಾತ್ಮಕ ಮತ್ತು ಮನರಂಜನಾ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತದೆ.

05 ರಿಂದ 16 ವರ್ಷದೊಳಗಿನ ಮಕ್ಕಳಿಗೆ ಭಾಗವಹಿಸಲು ಅವಕಾಶವಿದ್ದು, ಸರ್ಕಾರಿ ಶಾಲಾ ಮಕ್ಕಳು, ಗ್ರಾಮೀಣ ಪ್ರದೇಶದ, ಸೌಲಭ್ಯವಂಚಿತ, ವಿಕಲಚೇತನ ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗದ ಮಕ್ಕಳಿಗೆ ವಿಶೇಷ ಆದ್ಯತೆ ನೀಡಲಾಗುತ್ತದೆ.


ಶಿಬಿರದಲ್ಲಿ 50 ರಿಂದ 60 ವಿದ್ಯಾರ್ಥಿಗಳಿಗೆ ಮಾತ್ರ ಅವಕಾಶವಿದ್ದು, ಮೊದಲು ಬಂದವರಿಗೆ ಆದ್ಯತೆ ನೀಡಲಾಗುತ್ತದೆ. ಶಿಬಿರದ ಅವಧಿಯಲ್ಲಿ ವಿವಿಧ ಸ್ಪರ್ಧೆಗಳು ಹಾಗೂ ಉಪನ್ಯಾಸಗಳನ್ನೂ ಆಯೋಜಿಸಲಾಗುತ್ತದೆ.

ಅರ್ಜಿ ಸಲ್ಲಿಸಲು ಎಪ್ರಿಲ್ 18 ಕೊನೆಯ ದಿನವಾಗಿದ್ದು, ನಂತರ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಶಿಬಿರ ಆರಂಭದ ದಿನಾಂಕವನ್ನು ದೂರವಾಣಿ ಅಥವಾ ವಾಟ್ಸಾಪ್ ಮೂಲಕ ತಿಳಿಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಾರ್ಯಕ್ರಮ ಸಂಯೋಜಕರಾದ ರವಿ ಎಫ್. ಉಮಚಗಿ ಅವರನ್ನು ಸಂಪರ್ಕಿಸಬಹುದಾಗಿದೆ ಎಂದು ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗುರುವಿನ ಜ್ಞಾನ ಬೋಧಾಮೃತದಿಂದ ಬದುಕು ಉಜ್ವಲವಾಗುತ್ತದೆ

## ಸಂಸ್ಕಾರ ಮತ್ತು ಧರ್ಮವೇ ಜೀವನದ ನಿಜವಾದ ದಾರಿ-ರಂಭಾಪುರಿ ಶ್ರೀಗಳು



"ಸುಂದರ ಉಡುಗೆ ತೊಡುಗೆಯಿಂದ ವ್ಯಕ್ತಿತ್ವವನ್ನು ಬದಲಿಸಬಹುದು, ಆದರೆ ಬದುಕನ್ನು ಬದಲಿಸಲು ಸಾಧ್ಯವಿಲ್ಲ. ಧರ್ಮ, ಸಂಸ್ಕೃತಿ, ಸಭ್ಯತೆ ಮತ್ತು ಸಂಸ್ಕಾರವೇ ನಿಜವಾದ ಸಂಪತ್ತು. ಹೊರಗಿನ ಐಶ್ವರ್ಯ ಹೆಚ್ಚಾದರೂ ಒಳಗಿನ ಜ್ಞಾನ ಸಂಪತ್ತು ಬೆಳೆಯಬೇಕು."

– ರಂಭಾಪುರಿ ಶ್ರೀಗಳು.

ಸಮಾರಂಭಕ್ಕೂ ಮುನ್ನ ಗ್ರಾಮದಲ್ಲಿ ಬಾಳೆಹೊನ್ನೂರು ರಂಭಾಪುರಿ ಜಗದ್ಗುರುಗಳವರ ಅಡ್ಡಪಲ್ಲಕ್ಕಿ ಮಹೋತ್ಸವವು ವಾದ್ಯ ವೈಭವ, ಕಳಸ ಮತ್ತು ಕನ್ನಡಿಯೊಂದಿಗೆ ಭರ್ಜರಿಯಾಗಿ ಜರುಗಿತು. ಸಹಸ್ರಾರು ಭಕ್ತರು ಭಾಗವಹಿಸಿ ಶ್ರೀಗಳ ಆಶೀರ್ವಾದ ಪಡೆದರು.

■ ವಿಜಯಸಾಕ್ಷಿ ಸುದ್ದಿ, ಅಜ್ಜಂಪುರ

ಜನರು ಗುರಿಗಳಿಲ್ಲದೇ ದಿಕ್ಕುತಪ್ಪಿ ಅಜ್ಞಾನಾಂಧಕಾರದಲ್ಲಿ ತೇಲಿ ಮುಳುಗುತ್ತಿರುವ ಇಂದಿನ ಕಾಲಘಟ್ಟದಲ್ಲಿ, ಸಂಸ್ಕಾರ ಮತ್ತು ಸಚ್ಚಾರಿತ್ರದಿಂದ ಮಾತ್ರ ಜೀವನವನ್ನು ಶ್ರೀಮಂತಗೊಳಿಸಲು ಸಾಧ್ಯವೆಂದು ಬಾಳೆಹೊನ್ನೂರು ರಂಭಾಪುರಿ ಪೀಠದ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ತಾಲೂಕಿನ ಚನ್ನಾಪುರದಲ್ಲಿ ನಡೆದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಧರ್ಮ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು, ಧರ್ಮ, ಅರ್ಥ, ಕಾಮ ಮತ್ತು ಮೋಕ್ಷ ಎಂಬ ನಾಲ್ಕು ಪರಮ ಪುರುಷಾರ್ಥಗಳು ಮಾನವ ಜೀವನಕ್ಕೆ ಅವಶ್ಯಕವಾಗಿದ್ದು, ಜೀವನ ವಿಧಾನವೇ ನಿಜವಾದ ಧರ್ಮ ಎಂದು ಹೇಳಿದರು. ಸಕಲರ ಬಾಳಿಗೆ ಬಲ ತುಂಬುವುದು ಗುರುವಿನ ಪರಮ ಕರ್ತವ್ಯ ಎಂದು ಅವರು ಅಭಿಪ್ರಾಯಪಟ್ಟರು.

ಗುರುವಿನ ಜ್ಞಾನವೇ ಮನಸ್ಸಿನ ಮಲಿನತೆಯನ್ನು ನಿವಾರಿಸುವ ಶಕ್ತಿ. ಮನುಷ್ಯನ ಮನಸ್ಸು ಲೌಕಿಕದಲ್ಲಿ ಮಲಿನಗೊಂಡ ಬಟ್ಟೆಯಂತಿದ್ದು, ಅದನ್ನು ಪರಿಶುದ್ಧಗೊಳಿಸಲು ಗುರುವಿನ ಜ್ಞಾನ ಬೋಧಾಮೃತ ಅವಶ್ಯಕ ಎಂದು ತಿಳಿಸಿದರು.

ಸಮಾರಂಭವನ್ನು ಉದ್ಘಾಟಿಸಿದ ಮಾಜಿ ಶಾಸಕ ಡಿ.ಎಸ್. ಸುರೇಶ್ ಮಾತನಾಡಿ, ಮನುಷ್ಯ ಜೀವನದಲ್ಲಿ ಹಳೆಯ ಮೌಲ್ಯಗಳು ಮತ್ತು ಹೊಸ ಚಿಂತನೆಗಳು ಎರಡೂ ಅಗತ್ಯ. ಆಧುನಿಕತೆ ನಡುವೆಯೂ ಮೌಲ್ಯಗಳನ್ನು ಮರೆತರೆ ಬದುಕು ಶೂನ್ಯವಾಗುತ್ತದೆ ಎಂದು ಎಚ್ಚರಿಸಿದರು.

ಅಜ್ಜಂಪುರ ತಾಲೂಕು ಜಂಗಮ ಸಮಾಜದ ಅಧ್ಯಕ್ಷ ಎನ್.ವಿ. ಗಂಗಾಧರಯ್ಯ ಪ್ರಾಸ್ತಾವಿಕವಾಗಿ ಮಾತನಾಡಿ, ಆಧುನಿಕ ಪರಿಸರದ ಪರಿಣಾಮಗಳ ಜೊತೆಗೆ ಮನುಷ್ಯನಲ್ಲಿ ವೈಚಾರಿಕ ಮನೋಭಾವನೆ ಇರಬೇಕು, ಆದರೆ ನಾಸ್ತಿಕತೆ ಹೆಚ್ಚಾಗಬಾರದು ಎಂದರು. ಶ್ರೀ ಜಗದ್ಗುರು ರೇಣುಕಾಚಾರ್ಯರ ತತ್ವಗಳು ಜೀವನ ವಿಕಾಸಕ್ಕೆ ಮೂಲಾಧಾರವಾಗಿವೆ ಎಂದು ಹೇಳಿದರು. ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಅಜ್ಞಾನ ಮತ್ತು ಶಿಸ್ತಿನ ಕೊರತೆಯಿಂದ ಬದುಕು ದುರ್ಬಲವಾಗುತ್ತಿದೆ. ಪ್ರತಿಯೊಬ್ಬನಲ್ಲೂ ದೈವಿಕ ಶಕ್ತಿ ಅಡಗಿದ್ದು, ಅದನ್ನು ಗುರುಗಳ ಮೂಲಕ ಅರಿತುಕೊಳ್ಳಬಹುದು ಎಂದರು.

ಕಾರ್ಯಕ್ರಮದಲ್ಲಿ ಅಖಿಲ ಭಾರತ ವೀರಶೈವ ಮಹಾಸಭಾ ಜಿಲ್ಲಾ ಅಧ್ಯಕ್ಷ ಹೆಚ್.ಎಂ. ಲೋಕೇಶ್, ಬಡಗನಾಡು ಹೇಮರೆಡ್ಡಿ ಸಮಾಜದ ಅಧ್ಯಕ್ಷ ಹೆಚ್.ಸಿ. ರೇವಣಸಿದ್ಧಪ್ಪ, ಡಿ.ಸಿ.ಸಿ. ಬ್ಯಾಂಕ್ ನಿರ್ದೇಶಕ ಕೆ.ಆರ್. ಆನಂದಪ್ಪ ಸೇರಿದಂತೆ ಅನೇಕರು ಪಾಲ್ಗೊಂಡು ಗುರುರಕ್ಷೆ ಸ್ವೀಕರಿಸಿದರು.

## ಬಸವ ಯೋಗ ಮಂದಿರದಲ್ಲಿ ಅಕ್ಕಮಹಾದೇವಿ ಜಯಂತಿ ಆಚರಣೆ

# "ಪಂಚಶುಚಿ ತತ್ವ ಪಾಲನೆ ಸಮಾಜದ ಶಾಂತಿ-ಸ್ವಾಸ್ಥ್ಯಕ್ಕೆ ಮಾರ್ಗ"



■ ವಿಜಯಸಾಕ್ಷಿ ಸುದ್ದಿ, ಗದಗ

ಸಿದ್ಧಲಿಂಗ ನಗರದ ಬಸವ ಯೋಗ ಮಂದಿರದಲ್ಲಿ ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆ – ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ವತಿಯಿಂದ ಅಕ್ಕಮಹಾದೇವಿ ಜಯಂತಿ ಕಾರ್ಯಕ್ರಮವು ಧಾರ್ಮಿಕ ಹಾಗೂ ಸಾಂಸ್ಕೃತಿಕ ವೈಭವದಲ್ಲಿ ಯಶಸ್ವಿಯಾಗಿ ನಡೆಯಿತು.

ಈ ಸಂದರ್ಭದಲ್ಲಿ ಕೇಂದ್ರದ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರು ಮಾತನಾಡಿ, ಅಕ್ಕಮಹಾದೇವಿಯ ವಚನಗಳಲ್ಲಿ ಉಲ್ಲೇಖವಾದ "ನಡೆ-ಶುಚಿ, ನುಡಿ-ಶುಚಿ, ತನು-ಶುಚಿ, ಮನ-ಶುಚಿ, ಭಾವ-ಶುಚಿ" ಎಂಬ ಪಂಚತೀರ್ಥ ತತ್ವವನ್ನು ಪ್ರತಿಯೊಬ್ಬರೂ ತಮ್ಮ ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳುವುದು ಅತ್ಯಾವಶ್ಯಕ ಎಂದು ಹೇಳಿದರು.

ಇಂದಿನ ಸಮಾಜದಲ್ಲಿ ಸ್ವಾರ್ಥ, ವಂಚನೆ, ಮೋಸ ಮುಂತಾದ ದುರ್ಗುಣಗಳಿಂದ ಸಮಸ್ಯೆಗಳು ಹೆಚ್ಚುತ್ತಿದ್ದು, ಅಕ್ಕನ ತತ್ವಗಳನ್ನು ಅನುಸರಿಸುವುದರಿಂದ ವ್ಯಕ್ತಿಗತ ಹಾಗೂ ಸಾಮಾಜಿಕ ಶುದ್ಧತೆ ಸಾಧಿಸಲು ಸಾಧ್ಯವಾಗುತ್ತದೆ ಎಂದು ಅವರು ಸ್ಪಷ್ಟಪಡಿಸಿದರು.

ಮುಖ್ಯ ಅತಿಥಿಗಳಾದ ಮಹಾದೇವಿ ಚರಂತಿಮಠ, ವೈರಾಗ್ಯನಿಧಿ ಮತ್ತು ಮಹಾಸಾಧ್ವಿ ಶಿರೋಮಣಿ ಅವರು ಮಾತನಾಡಿ, ಅಕ್ಕಮಹಾದೇವಿಯ ತ್ಯಾಗ, ಆತ್ಮಸಂಯಮ ಮತ್ತು ನೈತಿಕ ಮೌಲ್ಯಗಳು ಇಂದಿನ ಸಮಾಜಕ್ಕೂ ಮಾದರಿಯಾಗಿವೆ ಎಂದರು. ಹೆಣ್ಣು ಮಕ್ಕಳು ತಮ್ಮ ವೇಷಭೂಷಣ, ಆಹಾರ, ವಿಚಾರ ಮತ್ತು ಜೀವನಶೈಲಿಯಲ್ಲಿ ಶಿಸ್ತನ್ನು ಅಳವಡಿಸಿಕೊಂಡರೆ ಸುಸಂಸ್ಕೃತ ಸಮಾಜ ನಿರ್ಮಾಣ ಸಾಧ್ಯವೆಂದು ಅಭಿಪ್ರಾಯಪಟ್ಟರು.

ಸಭಿಕರ ಪರವಾಗಿ ಗೌರಿ ಜಿರಂಕಳಿ ಅವರು ಅಕ್ಕಮಹಾದೇವಿಯ ಸಾಧನೆ ಮತ್ತು ಸಿದ್ಧಿಗಳನ್ನು ಸ್ಮರಿಸಿದರು. ಸುನಂದಾ ಜ್ಯಾನೋಪಂತರ ಅವರು ಅಕ್ಕಮಹಾದೇವಿಯ ಬಾಲ್ಯಾವಸ್ಥೆಯ ಜೋಗುಳಪದ ಹಾಡಿ ಕಾರ್ಯಕ್ರಮದ ಔಚಿತ್ಯವನ್ನು ಹೆಚ್ಚಿಸಿದರು.

ಕಾರ್ಯಕ್ರಮದಲ್ಲಿ ನಾಗಮ್ಮ ಕೆಳಗಡೆ, ಶೋಬಾ ಭಾಂಡಗೆ, ವೀಣಾ ಅಕ್ಕಿ, ಗಿರಿಜಾ ಅಂಗಡಿ, ಪ್ರತಿಭಾ ಇನಾಮತಿ, ಅರುಣಾ ಇಂಗಳ್ಳಿ, ವಿಜಯಲಕ್ಷ್ಮೀ ಮುಗಳಿ ಸೇರಿದಂತೆ ಅನೇಕ ಮಹಿಳೆಯರು ಭಾಗವಹಿಸಿ ವೀಣಾ, ಮಾಲಿಪಾಟೀಲ ಫಲಪುಷ್ಪ, ಅರಿಷಿಣ ಕುಂಕುಮ ನೀಡಿ ಭಕ್ತಿ ಸೇವೆ ಸಲ್ಲಿಸಿದರು.

# ಶಿಲ್ಪಾ ಶ್ರೀನಿವಾಸ್ ಚಿತ್ರದ ಚಿತ್ರೀಕರಣ ಮುಕ್ತಾಯ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸ್ನೇಹಾಲಯಂ ಕ್ರಿಯೇಷನ್ಸ್ ಬ್ಯಾನರ್‌ನ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ಶಿಲ್ಪಾ ಶ್ರೀನಿವಾಸ್ ಚಿತ್ರದ ಚಿತ್ರೀಕರಣ ಯಶಸ್ವಿಯಾಗಿ ಮುಗಿದಿದೆ. ಬಂಗಾರಪೇಟೆ ತಾಲ್ಲೂಕಿನ ಶ್ರೀ ಶಿವಶನೈಶ್ಚರ ದೇವಾಲಯದಲ್ಲಿ ಫ್ಯಾಮಿಲಿ ಸ್ಟಾರ್ ಅಭಿಜಿತ್ ರವರು "ದೇವರು ಸೃಷ್ಠಿಸೋ ಸಿನಿಮಾದಲ್ಲಿ ನಾವೆಲ್ಲಾ ಪಾತ್ರದಾರಿಗಳು", ಎಂಬ ಹಾಡಿಗೆ ಹೆಜ್ಜೆ ಹಾಕುವುದರ ಮೂಲಕ ಚಿತ್ರೀಕರಣ ಮುಕ್ತಾಯವಾಯಿತು.

ಹಾರರ್-ಸಸ್ಪೆನ್ಸ್ ಥ್ರಿಲ್ಲರ್ ಕಥಾವಸ್ತು ಇರುವ ಶಿಲ್ಪಾ ಶ್ರೀನಿವಾಸ್ ಚಿತ್ರದಲ್ಲಿ ಅಭಿಜಿತ್, ಶಿಲ್ಪಾ ಶ್ರೀನಿವಾಸ್, ಶೋಭರಾಜ್, ನಾಗೇಂದ್ರ ಅರಸ್, ಕಿಶೋರ್ ಕಾಸರಗೋಡು, ಸ್ವಾತಿ ಲಿಂಗರಾಜ್, ಪ್ರಿಯ, ಪಂಚಾಕ್ಷರಯ್ಯ, ಮರಿಸ್ವಾಮಿ, ಅಮೃತ ಕಾಳೆ, ಶಂಖನಾದ್ ಆಂಜಿನಪ್ಪ, ಮಾಸ್ಟರ್ ವೀರ ಧನುಷ್, ಅನ್ನಪರ್ಣ, ನಂದಿನಿ ಕಮ್ಮಯ್ಯ, ಧನ್ಯ ಭೂಮಿಕಾ, ಶ್ರೀ. ಬೇಬಿ ಶಾರಿಕಾ, ಕಾರ್ತೀಕ್, ಲಕ್ಷಿತ ಮನೋ ಮೊದಲಾದವರು ನಟಿಸಿದ್ದಾರೆ.

ಶಿಲ್ಪಾ ಶ್ರೀನಿವಾಸ್ ಚಿತ್ರಕ್ಕೆ ರಾಜೀವ್ ಕೃಷ್ಣ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನ ಮಾಡುವುದರ ಜೊತೆಗೆ ಸಾಹಸ ಮತ್ತು ನೃತ್ಯ ನಿರ್ದೇಶನದ ಹೊರೆ ಹೊತ್ತಿರುವುದು ವಿಶೇಷ. ಛಾಯಾಗ್ರಹಣ ಪ್ರಮೋದ್, ಸಂಕಲನ ಡಿ. ಮಲ್ಲೀ, ಸಂಗೀತ ಅನಿರುದ್ಧ ಶಾಸ್ತ್ರಿ, ಸಾಹಿತ್ಯ ಪ್ರತಾಪ್ ಭಟ್, ಸಹ ನಿರ್ದೇಶನ ಪ್ರವೀಣ್ ಭದ್ರಾವತಿ, ಮಲ್ಲೀ ಕೆ. ವಡ್ಡರಹಟ್ಟಿ, ಎಂ.ಜಿ. ಕಲ್ಲೇಶ್, ಡಾ. ಪ್ರಭು ಗಂಜಿಹಾಳ, ಡಾ. ವೀರೇಶ್ ಹಂಡಿಗಿ, ವಿ.ಎಂ.ಎಸ್. ಗೋಪಿ ಪತ್ರಿಕಾ ಸಂರಕ್ಷಣೆ ಮಾಡಿದ್ದಾರೆ.

ಶಿಲ್ಪಾ ಶ್ರೀನಿವಾಸ್ ಚಿತ್ರದ ಪೋಸ್ಟ್-ಪ್ರೊಡಕ್ಷನ್ ಕೆಲಸಗಳು ನಡೆಯುತ್ತಿದ್ದು, ಮೇ ತಿಂಗಳ ಮೊದಲ ವಾರದಲ್ಲಿ ಸಿನಿಮಾ ತೆರೆಗೆ ತರಲು ಚಿತ್ರತಂಡ ಸಿದ್ಧತೆ ನಡೆಸುತ್ತಿದೆ.



# ವಿಕಾಸ್ ದಾರಿಯಲ್ಲಿ ಮುನ್ನಡೆಯುತ್ತಿರುವ ಬಿಜೆಪಿ

## ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಸಂಸ್ಥಾಪನಾ ದಿನಾಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ (ಬಿಜೆಪಿ) ಗದಗ ಜಿಲ್ಲಾ ಕಾರ್ಯಾಲಯದಲ್ಲಿ 46ನೇ ಸಂಸ್ಥಾಪನಾ ದಿನವನ್ನು ಧ್ವಜಾರೋಹಣ ಮತ್ತು ವಿವಿಧ ಕಾರ್ಯಕ್ರಮಗಳ ಮೂಲಕ ಸಂಭ್ರಮದಿಂದ ಆಚರಿಸಲಾಯಿತು. ಜಿಲ್ಲಾ ಅಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಧ್ವಜಾರೋಹಣ ನೆರವೇರಿಸಿ, ಪಕ್ಷದ ಕಾರ್ಯಕರ್ತರು ಹಾಗೂ ನಾಗರಿಕರಿಗೆ ಕೃತಜ್ಞತೆ ಸಲ್ಲಿಸಿ 1980ರಲ್ಲಿ ಕೇವಲ ಇಬ್ಬರು ಸದಸ್ಯರಿಂದ ಆರಂಭವಾದ ಬಿಜೆಪಿ ಇಂದು ಜಾಗತಿಕ ಮಟ್ಟದಲ್ಲಿ ಪ್ರಭಾವಿ ರಾಜಕೀಯ ಶಕ್ತಿಯಾಗಿ ಬೆಳೆದಿರುವುದು ಹೆಮ್ಮೆಯ ವಿಚಾರವಾಗಿದೆ ಎಂದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಕೇಂದ್ರದಲ್ಲಿ ಮೂರು ಬಾರಿ ಅಧಿಕಾರಕ್ಕೆ ಬಂದಿರುವುದು ಮತ್ತು 21 ರಾಜ್ಯಗಳಲ್ಲಿ ಓಆಂ ಆಡಳಿತ ನಡೆಸುತ್ತಿರುವುದು ಪಕ್ಷದ ಬಲವನ್ನು ತೋರಿಸುತ್ತದೆ ಎಂದು ಹೇಳಿದರು. 'ಸಬ್ ಕಾ ಸಾಥ್, ಸಬ್ ಕಾ ವಿಕಾಸ್' ತತ್ವದಡಿ ದೇಶದ ಸಮಗ್ರ ಅಭಿವೃದ್ಧಿಗೆ ಬಿಜೆಪಿ ಬದ್ಧವಾಗಿದೆ ಎಂದು ತಿಳಿಸಿದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಹಿರಿಯ ನಾಯಕರ ತ್ಯಾಗ ಮತ್ತು ಕಾರ್ಯಕರ್ತರ ನಿಸ್ವಾರ್ಥ ಸೇವೆಯಿಂದ ಬಿಜೆಪಿ ದೇಶದ ಪ್ರಮುಖ ಪ್ರಜಾಪ್ರಭುತ್ವ ಶಕ್ತಿಯಾಗಿ ಬೆಳೆಯಲು ಸಾಧ್ಯವಾಯಿತು ಎಂದರು. ಮುಂದಿನ ದಿನಗಳಲ್ಲಿ ಪಕ್ಷವನ್ನು ಇನ್ನಷ್ಟು ಬಲಪಡಿಸಿ, ರಾಷ್ಟ್ರದ ಪ್ರಗತಿಗೆ ಶ್ರಮಿಸೋಣ ಎಂದು ಕರೆ ನೀಡಿದರು. ಹಿರಿಯ ಮುಖಂಡ ಎಂ.ಎಸ್. ಕರೀಗೌಡ್ರ ಅವರು ಮಾತನಾಡಿ, ಸಾಮಾನ್ಯ ಜನರ ಆಶಯಗಳನ್ನು ಈಡೇರಿಸುವಲ್ಲಿ ಬಿಜೆಪಿ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದ್ದು, ಸಂಸ್ಥಾಪನಾ ದಿನದಂದು ರಾಷ್ಟ್ರ ನಿರ್ಮಾಣದಲ್ಲಿ ಹೆಚ್ಚು ತೊಡಗಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶ್ರೀಪತಿ ಉಡುಪಿ, ಜಗನ್ನಾಥಸಾ ಭಾಂಡಗೆ, ಬಿ.ಎಚ್. ಲದ್ವಾ, ಎಂ.ಎಂ. ಹಿರೇಮಠ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಮಹಿಳಾ ಮೋರ್ಚಾ ಅಧ್ಯಕ್ಷೆ ನಿರ್ಮಲಾ ಕೊಳ್ಳಿ, ಸಿದ್ದು ಪಲ್ಲೇದ, ರವಿ ದಂಡಿನ, ಶಂಕರ ಕಾಕಿ, ಸುರೇಶ್ ಚಿತ್ತರಗಿ, ಶಶಿಧರ ದಿಂಡೂರ, ಸಂತೋಷ ಅಕ್ಕಿ, ರಮೇಶ ಸಜ್ಜಗಾರ, ನಾಗರಾಜ ತಳವಾರ, ದೇವೇಂದ್ರಪ್ಪ ಹೂಗಾರ, ವಿನೋದ ಹಂಸನೂರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಹುಲಕೋಟಿ ಗ್ರಾಮದಲ್ಲಿ ಬಿಜೆಪಿ ಸಂಸ್ಥಾಪನ ದಿನ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ವಿಧಾನಸಭಾ ಕ್ಷೇತ್ರದ ಹುಲಕೋಟಿ ಗ್ರಾಮದಲ್ಲಿ 46ನೇ ಸಂಸ್ಥಾಪನ ದಿನವನ್ನು ಪಕ್ಷದ ಮುಖಂಡರಾದ ವೆಂಕಟೇಶ ಸೂರಣಗಿ ಅವರ ಮನೆಯ ಮೇಲೆ ಪಕ್ಷದ ಧ್ವಜ ಹಾರಿಸುವ ಮೂಲಕ ಆಚರಣೆ ಮಾಡಲಾಯಿತು.

ಗದಗ ಗ್ರಾಮೀಣ ಮಂಡಲ ಅಧ್ಯಕ್ಷ ಬೂದಪ್ಪ ಹಳ್ಳಿ ಮಾತನಾಡಿ, ಸಂಕಲ್ಪ, ಸೇವೆ ಮತ್ತು ಸಮರ್ಪಣೆಯಿಂದ ಭಾರತೀಯ ಜನತಾ ಪಾರ್ಟಿಯನ್ನು ವಿಶ್ವದ ಅತಿ ದೊಡ್ಡ ರಾಜಕೀಯ ಪಕ್ಷವಾಗಿ ಬೆಳೆಸಿದ ಪ್ರತಿಯೊಬ್ಬ ಕಾರ್ಯಕರ್ತರಿಗೆ ಬಿಜೆಪಿ ಸ್ಥಾಪನಾ ದಿನದ ಶುಭಾಶಯಗಳು. ಪಕ್ಷದ ಪ್ರತಿಯೊಂದು ಹೆಜ್ಜೆಯಲ್ಲೂ ಕಾರ್ಯಕರ್ತರ ತ್ಯಾಗ, ಹಿರಿಯರ ಮಾರ್ಗದರ್ಶನ ಮತ್ತು ಜನರ ವಿಶ್ವಾಸವಿದೆ. ಸ್ಥಾಪನಾ ದಿನದ ಈ ಶುಭ ಸಂದರ್ಭದಲ್ಲಿ ನಮ್ಮ ಸಂಘಟನೆಯ ಶಕ್ತಿಯನ್ನು ಮತ್ತಷ್ಟು ಬಲಪಡಿಸಿ, ಜನಸೇವೆಗಾಗಿ ನಿಷ್ಠೆಯಿಂದ ಮುಂದುವರೆಯುವ ಸಂಕಲ್ಪ ಮಾಡೋಣ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷರಾದ ತೋಟಪ್ಪ(ರಾಜು) ಕುರುಡಗಿ, ವಿಧಾನ ಪರಿಷತ್ ಸದಸ್ಯರಾದ ಎಸ್.ವ್ಹಿ.ಸಂಕನೂರ, ಹಿರಿಯ ಮುಖಂಡರಾದ ಎಂ.ಎಸ್. ಕರಿಗೌಡ್ರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಅಶೋಕ ಸಂಕಣ್ಣವರ, ಗ್ರಾಮೀಣ ಮಂಡಲ ಪ್ರಧಾನ ಕಾರ್ಯದರ್ಶಿ ಮಂಜುನಾಥ ಹಳ್ಳೂರಮಠ, ದಾವಲಸಾಬ್ ಅಣ್ಣಿಗೇರಿ, ಮೋಹನ್ ಕೋರಿ, ರಾಜು ಗುಡಸಲಮನಿ, ಡಿ.ಬಿ.ಕರಿಗೌಡ್ರ, ಮಂಜುನಾಥ ಮರಿಯಪ್ಪಗೌಡ್ರ, ಸಿದ್ದಪ್ಪ ಈರಗಾರ, ಮಂಜುನಾಥ ಈರಗಾರ, ಬಸವರಾಜ ಅಕ್ಕಿ, ಮಂಜುನಾಥ ಶಾಂತಗೇರಿ, ವೀರುಪಾಕ್ಷಪ್ಪ ಜಗಲಿ, ಶಂಕರ ಕಾಕಿ, ಅನೀಲ ಅಬ್ಬಿಗೇರಿ, ಶಶಿಧರ ದಿಂಡೂರು, ಸಂತೋಷ ಅಕ್ಕಿ, ರಮೇಶ ಸಜ್ಜಗಾರ, ದೇವೆಂದ್ರಪ್ಪ ಹೂಗಾರ, ರವಿ ಮಾನ್ವಿ, ವಿಶ್ವನಾಥ ಟೆಂಗಿನಕಾಯಿ, ಬಸವರಾಜ ನರೇಗಲ್, ವಿರೇಶಪ್ರಭು ಗದಗಿನ, ವಿನೋದ ಹಂಸನೂರ ಉಪಸ್ಥಿತರಿದ್ದರು.

# ಹಡಪದ ಅಪ್ಪಣ್ಣ ಸಮಾಜದ ಪ್ರತಿಭಟನೆ

## ಅಪ್ಪಣ್ಣನವರ ಗವಿಯಲ್ಲಿ ಅನ್ಯ ಶರಣರ ಮೂರ್ತಿ ಪ್ರತಿಷ್ಠಾಪನೆಗೆ ವಿರೋಧ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬೀದರ ಜಿಲ್ಲೆಯ ಬಸವಕಲ್ಯಾಣದ ಅನುಭವ ಮಂಟಪದ ತ್ರಿಪುರಾಂತಕ ಹಡಪದ ಅಪ್ಪಣ್ಣನವರ ಅರಿವಿನ ಗವಿಯಲ್ಲಿ ಅನ್ಯ ಶರಣರ ಮೂರ್ತಿ ಪ್ರತಿಷ್ಠಾಪಿಸಿರುವುದನ್ನು ಖಂಡಿಸಿ ಮಂಗಳವಾರ ಲಕ್ಷ್ಮೇಶ್ವರ ಪಟ್ಟಣದಲ್ಲಿ ಹಡಪದ ಅಪ್ಪಣ್ಣ ಸಮಾಜದವರು ಪ್ರತಿಭಟನೆ ನಡೆಸಿದರು.

ತಾಲೂಕು ಅಧ್ಯಕ್ಷ ಗುಡ್ಡಪ್ಪ ಹಡಪದ ಅವರ ನೇತೃತ್ವದಲ್ಲಿ ಪಂಪ ಸರ್ಕಲ್‌ನಿಂದ ಪ್ರಮುಖ ಬೀದಿಗಳ ಮೂಲಕ ಮೆರವಣಿಗೆ ನಡೆಸಿ ತಹಸೀಲ್ದಾರ್ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಉಪತಹಸೀಲ್ದಾರ್ ಪ್ರಶಾಂತ ಕಿಮಾಯಿ ಮನವಿಯನ್ನು ಸ್ವೀಕರಿಸಿದರು.

ಈ ವೇಳೆ ಮಾತನಾಡಿದ ಸಮಾಜದ ಮುಖಂಡರು, ಬಸವಕಲ್ಯಾಣದ ತ್ರಿಪುರಾಂತಕ ಕೆರೆ ಹತ್ತಿರ ಬಸವಣ್ಣನವರ ಆಪ್ತ ಕಾರ್ಯದರ್ಶಿಯಾಗಿದ್ದ ಶಿವಶರಣ ಹಡಪದ ಅಪ್ಪಣ್ಣನವರ ಅರಿವಿನ ಗವಿ ಶತಮಾನಗಳ ಇತಿಹಾಸ ಹೊಂದಿದ್ದು, ಅಲ್ಲಿ ಬೇರೆ ಶರಣರ ಮೂರ್ತಿ ಪ್ರತಿಷ್ಠಾಪಿಸಿರುವುದು ಸಮುದಾಯದ ಭಕ್ತಿಭಾವನೆಗೆ ಧಕ್ಕೆ ತಂದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಈ ವಿಚಾರವಾಗಿ ಹಲವಾರು ಬಾರಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿ, ಪ್ರತಿಭಟನೆಗಳನ್ನೂ ನಡೆಸಿದ್ದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಆರೋಪಿಸಿದ ಅವರು, ಅಖಿಲ ಕರ್ನಾಟಕ ಹಡಪದ ಅಪ್ಪಣ್ಣ ಸಮಾಜದ ವತಿಯಿಂದ ರಾಜ್ಯಾದ್ಯಂತ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಸರ್ಕಾರ ಕೂಡಲೇ ಸ್ಪಂದಿಸಿ ಸೂಕ್ತ ಕ್ರಮ ಕೈಗೊಂಡು ಗವಿಯ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಎಚ್.ಎಸ್. ವಿನೋದ, ಲಕ್ಷ್ಮಣ ನಾವಿ, ಮುತ್ತಪ್ಪ ನಾವಿ, ವೀರಣ್ಣ ಹಡಪದ, ಸೋಮು ನಾವಿ, ಶಂಕರ್ ನಾವಿ, ಯಲ್ಲಪ್ಪ ಹಡಪದ, ನಾಗಪ್ಪ ಹಡಪದ, ಮಂಜುನಾಥ ನಾವಿ ಸೇರಿದಂತೆ ಸಮಾಜದ ಹಿರಿಯರು ಹಾಗೂ ಯುವಕರು ಭಾಗವಹಿಸಿದ್ದರು.

# ಎ.12ರಂದು ರಾಜ್ಯ ಮಟ್ಟದ ಮುಕ್ತ ರಸಪ್ರಶ್ನೆ ಸ್ಪರ್ಧೆ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿ ಪ್ರಯುಕ್ತ ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲೂಕು ಆಡಳಿತ, ಪೊಲೀಸ್ ಇಲಾಖೆ ಹಾಗೂ ಶಿಕ್ಷಣ ಇಲಾಖೆ ಸ್ಥಳೀಯ ದಲಿತ, ಕನ್ನಡ ಪರ ಹಾಗೂ ಇತರೆ ಸಂಘಟನೆಗಳ ಸಹಯೋಗದಲ್ಲಿ ರಾಜ್ಯ ಮಟ್ಟದ ಮುಕ್ತ ರಸಪ್ರಶ್ನೆ ಸ್ಪರ್ಧೆಯನ್ನು ಆಯೋಜಿಸಿದೆ.

ಈ ಸ್ಪರ್ಧೆ ಎಪ್ರಿಲ್ 12 ರಂದು ಬೆಳಿಗ್ಗೆ 9 ಗಂಟೆಗೆ ಕುಷ್ಟಗಿ ಪಟ್ಟಣದ ಕ್ರೈಸ್ಟ್ ದಿ ಕಿಂಗ್ ಶಾಲೆಯಲ್ಲಿ ನಡೆಯಲಿದೆ. ಯಾವುದೇ ವಯೋಮಿತಿ ಅಥವಾ ವಿದ್ಯಾರ್ಹತೆಯ ನಿರ್ಬಂಧವಿಲ್ಲದೆ ಎಲ್ಲ ಆಸಕ್ತರು ಭಾಗವಹಿಸಬಹುದು. ರಾಜ್ಯದ ಯಾವುದೇ ಜಿಲ್ಲೆಯ ಅಭ್ಯರ್ಥಿಗಳು ತಮ್ಮ ಆಧಾರ್ ಕಾರ್ಡ್ ಪ್ರತಿಯೊಂದಿಗೆ ಸ್ಪರ್ಧೆಯಲ್ಲಿ ಪಾಲ್ಗೊಳ್ಳಬಹುದು.

ಸ್ಪರ್ಧೆಯ ಮೊದಲ ಸುತ್ತಿನಲ್ಲಿ 50 ಅಂಕಗಳ ಬಹು ಆಯ್ಕೆ ಪ್ರಶ್ನೆಗಳು ಇರಲಿದ್ದು, ಅದರಲ್ಲಿ ಅತಿ ಹೆಚ್ಚು ಅಂಕಗಳಿಸಿದ ಮೊದಲ 12 ಅಭ್ಯರ್ಥಿಗಳು ಎರಡನೇ ಸುತ್ತಿಗೆ ಆಯ್ಕೆಯಾಗುತ್ತಾರೆ. ನಂತರ ಈ 12 ಮಂದಿಯನ್ನು 6 ತಂಡಗಳಾಗಿ ವಿಭಜಿಸಿ ಮೌಖಿಕ ಸುತ್ತು ನಡೆಸಲಾಗುತ್ತದೆ.


ವಿಜೇತ ತಂಡಗಳಿಗೆ 50,000 ಪ್ರಥಮ ಬಹುಮಾನ, 30,000 ದ್ವಿತೀಯ ಬಹುಮಾನ ಹಾಗೂ 20,000 ತೃತೀಯ ಬಹುಮಾನ ನೀಡಲಾಗುತ್ತದೆ. ಭಾಗವಹಿಸಿದ ಎಲ್ಲರಿಗೂ ಪ್ರಮಾಣ ಪತ್ರ ವಿತರಿಸಲಾಗುತ್ತದೆ.

ಸ್ಪರ್ಧೆಯ ಪಠ್ಯದಲ್ಲಿ ಡಾ. ಅಂಬೇಡ್ಕರ್ ಅವರ ಜೀವನ, ಶಿಕ್ಷಣ, ರಾಷ್ಟ್ರೀಯ ಹೋರಾಟ, ಸಂವಿಧಾನ ರಚನೆ, ಸಂಘಟನೆ, ಚಿಂತನೆಗಳು, ಮೀಸಲಾತಿ, ಮಹಿಳಾ ಹಕ್ಕುಗಳು ಹಾಗೂ ಜಾಗತಿಕ ನಾಯಕತ್ವ ಸೇರಿದಂತೆ ವಿವಿಧ ವಿಷಯಗಳನ್ನು ಒಳಗೊಂಡಿದೆ.

ಆಸಕ್ತರು ಎಪ್ರಿಲ್ 11 ರೊಳಗಾಗಿ ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಎಸ್.ಎಸ್. ತೆಮಿನಾಳ (9740421421), ಶ್ರೀನಿವಾಸ ದೇಸಾಯಿ (9845808941), ಸುರೇಶ್ ಅಂಕೋಲಿ (9901797951), ಅಮರೇಗೌಡ (9902180043) ಅಥವಾ ಭರಮಪ್ಪ ಪಿ (9731799080) ಅವರನ್ನು ಸಂಪರ್ಕಿಸಬಹುದಾಗಿದೆ ಎಂದು ಕುಷ್ಟಗಿ ವೃತ್ತದ ಪೊಲೀಸ್ ಇನ್ಸಪೆಕ್ಟರ್ ವಿಶ್ವನಾಥ ಹಿರೇಗೌಡರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಜನಗಣತಿ ತರಬೇತಿ ಕಾರ್ಯಾಗಾರಗಳಿಗೆ ಜಿಲ್ಲಾಧಿಕಾರಿ ಸ್ನೇಹಲ್ ಭೇಟಿ**

# ನಿಗದಿತ ಅವಧಿಯೊಳಗೆ ಗಣತಿ ಕಾರ್ಯ ಪೂರ್ಣಗೊಳಿಸಿ



**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಎಪ್ರಿಲ್ 16 ರಿಂದ ದೇಶಾದ್ಯಂತ ಮನೆಮನೆ ಜನಗಣತಿ ಕಾರ್ಯ ಆರಂಭವಾಗಲಿದ್ದು, ಜಿಲ್ಲೆಯಲ್ಲಿಯೂ ಎಪ್ರಿಲ್ 16 ರಿಂದ ಮೇ 16ರವರೆಗೆ ಗಣತಿ ಕಾರ್ಯ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್ ತಿಳಿಸಿದ್ದಾರೆ. ನಿಗದಿತ ಅವಧಿಯೊಳಗೆ ಕಾರ್ಯ ಪೂರ್ಣಗೊಳಿಸಬೇಕು, ಯಾವುದೇ ಕಾರಣಕ್ಕೂ ವಿಳಂಬ ಮಾಡಬಾರದು ಎಂದು ಅವರು ಸೂಚಿಸಿದರು.

ನಗರದ ಲ್ಯಾಮಿಂಗ್ಟನ್ ಶಾಲೆಯಲ್ಲಿ ನಡೆದ ಗಣತಿದಾರರ ತರಬೇತಿ ಕಾರ್ಯಾಗಾರಕ್ಕೆ ಭೇಟಿ ನೀಡಿ ಮಾತನಾಡಿದ ಅವರು, ಪ್ರತಿ ಗಣತಿದಾರರಿಗೆ ಸುಮಾರು 200 ಮನೆಗಳ ಗಣತಿ ಗುರಿ ನೀಡಲಾಗಿದೆ. ದಿನಕ್ಕೆ ಕನಿಷ್ಠ 10 ಮನೆಗಳ ಗಣತಿ ಮಾಡಿದರೆ 30 ದಿನಗಳಲ್ಲಿ ಗುರಿ ಸಾಧಿಸಬಹುದು ಎಂದು ಹೇಳಿದರು. ಮನೆಮನೆಗೆ ತೆರಳಿ ಮಾಹಿತಿ ಸಂಗ್ರಹಿಸುವ ಸಂದರ್ಭದಲ್ಲಿ, ಮನೆಯಲ್ಲಿರುವ ಯಾರಿಂದಾದರೂ ಮಾಹಿತಿ ಪಡೆಯಬಹುದು. ಜನರಲ್ಲಿ ಜಾಗೃತಿ ಮೂಡಿಸಿದರೆ ಗಣತಿ ಕಾರ್ಯ ಸುಗಮವಾಗುತ್ತದೆ ಎಂದು ಅವರು ತಿಳಿಸಿದರು. ಇತರೆ ಊರುಗಳಿಗೆ ತೆರಳಿರುವ ಜನರ ಮಾಹಿತಿಯಲ್ಲಿ ಪುನರಾವರ್ತನೆ ಆಗದಂತೆ ವಿಶೇಷ ಗಮನ ಹರಿಸಬೇಕು. ವಿವಿಧ ಭಾಷೆಗಳಲ್ಲಿ ಮಾಹಿತಿ ಸಂಗ್ರಹಿಸಲು ಅವಕಾಶವಿದೆ. ಯಾವುದೇ ಮನೆಗಳು ಗಣತಿಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕು. ಜನರಿಂದ ದೂರುಗಳು ಬರದಂತೆ ಕಾರ್ಯ ನಿರ್ವಹಿಸಬೇಕು ಎಂದು ಸೂಚಿಸಿದರು.

ಜಿಲ್ಲಾ ಪಂಚಾಯತ ಸಿಇಓ ಭುವನೇಶ ಪಾಟೀಲ ಮಾತನಾಡಿ, ಮನೆಮನೆಗೆ ಭೇಟಿ ನೀಡಿ ಸರಿಯಾದ ಮಾಹಿತಿ ಸಂಗ್ರಹಿಸುವುದು ಅತ್ಯಂತ ಮುಖ್ಯ. ಜನಗಣತಿ ಕಾರ್ಯ ಹೆಮ್ಮೆಯ ಸಂಗತಿ. ಸೈನಿಕರಂತೆ ಕಾರ್ಯನಿರ್ವಹಿಸಿ, ಮಾಹಿತಿಯ ಗೌಪ್ಯತೆ ಕಾಪಾಡಬೇಕು ಎಂದು ಹೇಳಿದರು. ಜಿಲ್ಲಾಡಳಿತದಿಂದ ಎಲ್ಲಾ ರೀತಿಯ ಸಹಕಾರ ನೀಡಲಾಗುವುದು ಎಂದರು. ನಂತರ ಅಧಿಕಾರಿಗಳು ಜಿಲ್ಲೆಯ ವಿವಿಧ ತರಬೇತಿ ಕೇಂದ್ರಗಳಿಗೆ ಭೇಟಿ ನೀಡಿದರು.

"ಗಣತಿಯ ಮೊದಲ ವಾರದಲ್ಲೇ ಚುರುಕಾಗಿ ಕಾರ್ಯನಿರ್ವಹಿಸಿ ಬೇಗನೆ ಪೂರ್ಣಗೊಳಿಸಬೇಕು. ಜನರು ಮನೆಯಲ್ಲಿ ಸಿಗುವ ಸಮಯದಲ್ಲಿ ಗಣತಿ ಮಾಡುವುದು ಸೂಕ್ತ. ಮನೆಯ ಮ್ಯಾಪಿಂಗ್ ಕೂಡ ಮಹತ್ವದ್ದಾಗಿದೆ."

**– ಸ್ನೇಹಲ್ ಆರ್, ಜಿಲ್ಲಾಧಿಕಾರಿ.**

## ಜಿಲ್ಲೆಯಲ್ಲಿ 1,755 ಸಿಬ್ಬಂದಿಗೆ ತರಬೇತಿ

ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಒಟ್ಟು 1,755 ಸಿಬ್ಬಂದಿಗಳಿಗೆ ಜನಗಣತಿ ತರಬೇತಿ ನೀಡಲಾಗುತ್ತಿದೆ. ಒಟ್ಟು 1,431 ಬ್ಲಾಕ್‌ಗಳು, 1,497 ಗಣತಿದಾರರು, ಮತ್ತು 258 ಮೇಲ್ವಿಚಾರಕರು ಕಾರ್ಯನಿರ್ವಹಿಸಲಿದ್ದಾರೆ. ಎಪ್ರಿಲ್ 7ರಿಂದ 9ರವರೆಗೆ ಅಳ್ನಾವರ, ಧಾರವಾಡ, ನವಲಗುಂದ, ಅಣ್ಣಿಗೇರಿ, ಹುಬ್ಬಳ್ಳಿ, ಕುಂದಗೋಳ ಹಾಗೂ ಕಲಘಟಗಿ ಸೇರಿದಂತೆ ವಿವಿಧ ಸ್ಥಳಗಳಲ್ಲಿ ತರಬೇತಿ ನಡೆಯುತ್ತಿದೆ.

*) ಗಣತಿಯಲ್ಲಿ ಸುಮಾರು 33 ಪ್ರಶ್ನೆಗಳು ಇರಲಿವೆ
*) ಪ್ರಶ್ನೆಗಳು ಮನೆಗೆ ಸಂಬಂಧಿಸಿದವು ಮಾತ್ರ
*) ವೈಯಕ್ತಿಕ ಪ್ರಶ್ನೆಗಳು ಇರುವುದಿಲ್ಲ
*) ಅಡುಗೆಮನೆ, ಶೌಚಾಲಯ, ಮೇಲ್ಛಾವಣಿ ಮುಂತಾದ ಮಾಹಿತಿ ಸಂಗ್ರಹಿಸಲಾಗುತ್ತದೆ

**ಮುಂಗಾರು ಪೂರ್ವ ಕೃಷಿ ಪರಿಕರ ಮಾರಾಟಗಾರರ ಸಭೆಯಲ್ಲಿ ಚೇತನಾ ಪಾಟೀಲ**

# ಎಫ್‌ಐಡಿ ಕಡ್ಡಾಯ, ಪಿಓಎಸ್ ಮೂಲಕವೇ ಯೂರಿಯಾ ವಿತರಣೆ



"ಎಫ್‌ಐಡಿ ಕಡ್ಡಾಯಗೊಳಿಸಿ ಪಿಓಎಸ್ ಮೂಲಕ ರಸಗೊಬ್ಬರ ವಿತರಣೆ ಮಾಡಿದರೆ ಕಾಳಸಂತೆ ತಡೆಯಲು ಮತ್ತು ಮಣ್ಣಿನ ಫಲವತ್ತತೆ ಕಾಪಾಡಲು ಸಾಧ್ಯ."

**– ಶ್ರೀಮತಿ ಚೇತನಾ ಪಾಟೀಲ,** ಜಂಟಿ ಕೃಷಿ ನಿರ್ದೇಶಕಿ.

**■ವಿಜಯಸಾಕ್ಷಿ ಸುದ್ದಿ, ಗದಗ**

ರೈತರು ರಸಗೊಬ್ಬರ ಖರೀದಿಸಲು ಎಫ್‌ಐಡಿ ಸಂಖ್ಯೆಗಳನ್ನು ಕಡ್ಡಾಯವಾಗಿ ಹೊಂದಿರಬೇಕು ಹಾಗೂ ಪಿಓಎಸ್ ಯಂತ್ರಗಳ ಮೂಲಕವೇ ಯೂರಿಯಾ ಸೇರಿದಂತೆ ರಸಗೊಬ್ಬರ ವಿತರಣೆ ನಡೆಯಲಿದೆ ಎಂದು ಜಂಟಿ ಕೃಷಿ ನಿರ್ದೇಶಕಿ ಶ್ರೀಮತಿ ಚೇತನಾ ಪಾಟೀಲ ಹೇಳಿದರು.

ಕೃಷಿ ಸಂಶೋಧನಾ ಕೇಂದ್ರ, ಗದಗದಲ್ಲಿ ಎಪ್ರಿಲ್ 6ರಂದು ನಡೆದ ಮುಂಗಾರು ಪೂರ್ವ ಕೃಷಿ ಪರಿಕರ ಮಾರಾಟಗಾರರ ಸಭೆ ಹಾಗೂ ಯೂರಿಯಾ ವಿತರಣಾ ತಂತ್ರಾಂಶ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ರೈತನ ಹಿಡುವಳಿ ಮತ್ತು ಬೆಳೆ ಆಧಾರದ ಮೇಲೆ ಕೆ-ಕಿಸಾನ್ ತಂತ್ರಜ್ಞಾನ ಮೂಲಕ ರಸಗೊಬ್ಬರ ವಿತರಣೆ ಮಾಡಲಾಗುತ್ತಿದ್ದು, ಇದರಿಂದ ಕಾಳಸಂತೆ ತಡೆದು ಮಣ್ಣಿನ ಫಲವತ್ತತೆ ಕಾಪಾಡಲು ಸಹಕಾರಿಯಾಗುತ್ತದೆ ಎಂದು ವಿವರಿಸಿದರು. ವ್ಯಾಪಾರಸ್ಥರು ನಿಗದಿತ ದರಕ್ಕಿಂತ ಹೆಚ್ಚು ಬೆಲೆಯಲ್ಲಿ ಮಾರಾಟ ಮಾಡಬಾರದು ಹಾಗೂ ದರ ಮತ್ತು ದಾಸ್ತಾನು ವಿವರಗಳನ್ನು ಸಾರ್ವಜನಿಕರಿಗೆ ಪ್ರದರ್ಶಿಸಬೇಕು. ನಿಯಮ ಉಲ್ಲಂಘಿಸಿದರೆ ಪರವಾನಿಗೆ ಅಮಾನತು ಅಥವಾ ರದ್ದು ಮಾಡುವ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಸಿದರು.

ಸಹಾಯಕ ಕೃಷಿ ನಿರ್ದೇಶಕ ಮಲ್ಲಯ್ಯ ಕೊರವನವರ ಪ್ರಾಸ್ತಾವಿಕವಾಗಿ ಮಾತನಾಡಿ, ಕಳೆದ ಮುಂಗಾರು ಹಂಗಾಮಿನಲ್ಲಿ ವ್ಯಾಪಾರಸ್ಥರು ನೀಡಿದ ಸಹಕಾರವನ್ನು ಸ್ಮರಿಸಿದರು. ಜಾಗತಿಕ ಪರಿಸ್ಥಿತಿಯಿಂದ ಗೊಬ್ಬರ ಪೂರೈಕೆಯಲ್ಲಿ ವ್ಯತ್ಯಯ ಸಾಧ್ಯತೆ ಇರುವುದರಿಂದ, ಲಭ್ಯವಿರುವ ಯೂರಿಯಾವನ್ನು ಎಫ್‌ಐಡಿ ಆಧಾರಿತ ತಂತ್ರಾಂಶದ ಮೂಲಕ ಪಿಓಎಸ್ ಯಂತ್ರಗಳಿಂದ ನಿಗದಿತ ಮಿತಿಯಲ್ಲಿ ವಿತರಿಸಲು ಸಹಕರಿಸಬೇಕು ಎಂದು ಮನವಿ ಮಾಡಿದರು.

ಮುಖ್ಯ ಅತಿಥಿಗಳಾಗಿ ಉಪ ಕೃಷಿ ನಿರ್ದೇಶಕಿ ಶ್ರೀಮತಿ ಸ್ಫೂರ್ತಿ ಜಿ.ಎಸ್., ಜಿಲ್ಲಾ ವಿಚಕ್ಷಣಾ ಅಧಿಕಾರಿ ಶ್ರೀಮತಿ ಮೇಘನಾ ನಾಡಗೀರ್, ಕೃಷಿ ಸಂಶೋಧನಾ ಕೇಂದ್ರದ ಮುಖ್ಯಸ್ಥೆ ಶ್ರೀಮತಿ ಕಲಾವತಿ ಹಾಗೂ ಕೃಷಿ ಪರಿಕರ ಮಾರಾಟಗಾರರ ಸಂಘದ ಉಪಾಧ್ಯಕ್ಷ ಪ್ರಕಾಶ ಕಗದಾಳ ಭಾಗವಹಿಸಿದ್ದರು.

ರಸಗೊಬ್ಬರ ವ್ಯಾಪಾರಸ್ಥರ ಸಂಘದ ಕಾರ್ಯದರ್ಶಿ ಸಂಜಯ್ ರೊದ್ದಂ ಮಾತನಾಡಿ, ಕೃಷಿ ಇಲಾಖೆಯ ಮಾರ್ಗಸೂಚಿಗಳಂತೆ ರೈತರ ಹಿತ ಕಾಪಾಡಲು ಸಂಪೂರ್ಣ ಸಹಕಾರ ನೀಡುವುದಾಗಿ ತಿಳಿಸಿದರು.

ಇಲಾಖೆಯ ಕೃಷಿ ಅಧಿಕಾರಿಗಳಾದ ಶ್ರೀಮತಿ ಸೌಮ್ಯ, ಶ್ರೀಮತಿ ರಾಜೇಶ್ವರಿ ಹಾಗೂ ಶ್ರೀಮತಿ ಬಸವರಾಜೇಶ್ವರಿ ಯೂರಿಯಾ ವಿತರಣಾ ತಂತ್ರಾಂಶದ ಕುರಿತು ವಿವರಿಸಿದರು. ಗದಗ ತಾಲೂಕು ಖಾಸಗಿ ಕೃಷಿ ಪರಿಕರ ಮಾರಾಟಗಾರರು, ಸಹಕಾರಿ ಸಂಘದ ಸದಸ್ಯರು ಹಾಗೂ ರೈತ ಉತ್ಪಾದಕ ಕಂಪನಿಗಳ ಪ್ರತಿನಿಧಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

**ಕೃಷ್ಣಗೌಡ ಪಾಟೀಲಗೆ ಅರವಿಂದ ಹುಲ್ಲೂರ ಪ್ರಶ್ನೆ- ಉದ್ಯಮ, ಮೂಲಸೌಕರ್ಯ, ಯೋಜನೆಗಳ ಬಗ್ಗೆ ಆರೋಪ**

# ಗದಗ ಅಭಿವೃದ್ಧಿ ಯಾಕೆ ಹಿಂದುಳಿದಿದೆ? ಉದ್ಯೋಗ ಯಾಕೆ ಸಿಗಲಿಲ್ಲ?

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಕಾರ್ಯಕಾರಣಿ ಸಭೆಯಲ್ಲಿ ಯುವಕರಿಗೆ ಉದ್ಯೋಗಾವಕಾಶ ಕಲ್ಪಿಸುವ ಸಂಕಲ್ಪ ಮಾಡೋಣ ಎಂದು ಕೃಷ್ಣಗೌಡ ಪಾಟೀಲ ನೀಡಿದ ಹೇಳಿಕೆ ಕುರಿತು ಬಿಜೆಪಿ ಮುಖಂಡ ಅರವಿಂದ ಹುಲ್ಲೂರ ಪ್ರಶ್ನೆಗಳನ್ನು ಎತ್ತಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅರವಿಂದ ಹುಲ್ಲೂರ, ಕಳೆದ ಐವತ್ತು ವರ್ಷಗಳಿಂದ ಆಡಳಿತ ನಡೆಸಿದ ಕುಟುಂಬವೇ ಈಗ ಉದ್ಯೋಗದ ಭರವಸೆ ನೀಡುತ್ತಿರುವುದು ಹೇಗೆ ಸಾಧ್ಯ ಎಂದು ಪ್ರಶ್ನಿಸಿದ ಅವರು, ದಿ. ಕೆ.ಹೆಚ್. ಪಾಟೀಲ್, ಮಾಜಿ ಶಾಸಕ ಡಿ.ಆರ್. ಪಾಟೀಲ್ ಹಾಗೂ ಸಚಿವ ಎಚ್.ಕೆ. ಪಾಟೀಲ್ ಅವರ ಕಾಲದಲ್ಲಿ ಗದಗ ಜಿಲ್ಲೆಗೆ ದೊಡ್ಡ ಉದ್ಯಮಗಳನ್ನು ತರಲಾಗದಿರುವುದಕ್ಕೆ ಕಾರಣವೇನು ಎಂದು ಕೇಳಿದ್ದಾರೆ.

ಹುಲಕೋಟಿಯ, ಗದಗ-ಬೆಟಗೇರಿ ಕೋ-ಆಪರೇಟಿವ್ ಟೆಕ್ಸ್‌ಟೈಲ್ ಮಿಲ್, ಸ್ಪಿನ್ನಿಂಗ್ ಮಿಲ್ ಹಾಗೂ ಬಿಂಕದಕಟ್ಟೆಯ ಆಯಿಲ್ ಮಿಲ್ ಮುಂತಾದ ಉದ್ಯಮಗಳು ಸ್ಥಗಿತಗೊಂಡಿರುವುದಕ್ಕೆ ಕಾರಣ ತಿಳಿಸಬೇಕು ಎಂದು ಒತ್ತಾಯಿಸಿದ್ದಾರೆ. ಜೊತೆಗೆ, ಬಿಂಕದಕಟ್ಟಿಯ ಇಂಡಸ್ಟ್ರಿಯಲ್ ಎಸ್ಟೇಟ್‌ನಲ್ಲಿ ಎಷ್ಟು ಉದ್ಯಮಗಳು ಕಾರ್ಯನಿರ್ವಹಿಸುತ್ತಿವೆ ಹಾಗೂ ಎಷ್ಟು ಮಂದಿಗೆ ಉದ್ಯೋಗ ಸಿಕ್ಕಿದೆ ಎಂಬುದರ ಕುರಿತು ಅಂಕಿ-ಅಂಶಗಳನ್ನು ಬಹಿರಂಗಪಡಿಸಬೇಕೆಂದು ಆಗ್ರಹಿಸಿದರು.



ಹಳ್ಳಿಗುಡಿ ಪ್ರದೇಶದಲ್ಲಿ ಪೋಸ್ಕೊ ಕಂಪನಿಯ ಸ್ಟೀಲ್ ಪ್ಲಾಂಟ್ ಸ್ಥಾಪನೆಗೆ ನಡೆದ ಪ್ರಯತ್ನದಿಂದ ಸುಮಾರು 10 ಸಾವಿರ ಯುವಕರಿಗೆ ಉದ್ಯೋಗ ಸಿಗುವ ಸಾಧ್ಯತೆ ಇತ್ತು. ಆದರೆ ಆ ಯೋಜನೆಗೆ ವಿರೋಧ ವ್ಯಕ್ತವಾಗಿದ್ದು, ಜಿಲ್ಲೆಯ ಯುವಕರ ಉದ್ಯೋಗ ಕನಸಿಗೆ ಧಕ್ಕೆಯಾಯಿತು ಎಂದು ಆರೋಪಿಸಿದ್ದಾರೆ.

ಜಿಲ್ಲೆಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯನ್ನೂ ಅವರು ತೀವ್ರವಾಗಿ ಉಲ್ಲೇಖಿಸಿದ್ದು, ಕುಡಿಯುವ ನೀರಿನ ಸಮಸ್ಯೆ ಇನ್ನೂ ಪರಿಹಾರವಾಗಿಲ್ಲ, 25 ವರ್ಷಗಳ ಹಿಂದೆ ಪ್ರಾರಂಭವಾದ ಒಳಚರಂಡಿ ಯೋಜನೆ ಪೂರ್ಣಗೊಂಡಿಲ್ಲ, ಪುಟ್ಟರಾಜ ಗವಾಯಿಗಳ ಸಮುದಾಯ ಭವನ ಇನ್ನೂ ಅಪೂರ್ಣವಾಗಿದೆ ಎಂದು ಅರವಿಂದ ಹುಲ್ಲೂರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಪ್ರತಿ ವರ್ಷ ಮಳೆಗಾಲದಲ್ಲಿ ನಾಲ್ಕನೇ ವಾರ್ಡ್‌ನಲ್ಲಿ ಹಳ್ಳ ಹಾಗೂ ಗಟಾರು ನೀರು ಮನೆಗಳಿಗೆ ನುಗ್ಗುವ ಸಮಸ್ಯೆ ಮುಂದುವರಿದಿದೆ. ಹಮಾಲರ ಕಾಲೋನಿ ಮತ್ತು ಗಂಗಿಮಡಿ ಪ್ರದೇಶಗಳಲ್ಲಿ ನೀರು ಹಾಗೂ ರಸ್ತೆ ಸಮಸ್ಯೆಗಳು ಇನ್ನೂ ಬಗೆಹರಿದಿಲ್ಲ ಎಂದು ದೂರಿದ್ದಾರೆ.

ಆಶ್ರಯ ಮನೆಗಳ ಹಂಚಿಕೆಯಲ್ಲಿ ಅಸಮರ್ಪಕತೆ ಇದೆ ಎಂಬ ಆರೋಪಗಳನ್ನು ಉಲ್ಲೇಖಿಸಿರುವ ಅವರು, ಸೌಲಭ್ಯವಿರುವ ಕೆಲವರು ಒಂದಕ್ಕಿಂತ ಹೆಚ್ಚು ಮನೆಗಳನ್ನು ಪಡೆದು ಬಾಡಿಗೆಗೆ ನೀಡುತ್ತಿದ್ದಾರೆ ಎಂಬ ಮಾಹಿತಿ ಕೇಳಿ ಬರುತ್ತಿದೆ ಎಂದು ಹೇಳಿದ್ದಾರೆ. ಮನೆ ಇಲ್ಲದ ಬಡವರಿಗೆ ಸಮರ್ಪಕವಾಗಿ ಮನೆ ಸಿಗುವ ವ್ಯವಸ್ಥೆ ಯಾಕೆ ಮಾಡಲಾಗುತ್ತಿಲ್ಲ ಎಂದು ಪ್ರಶ್ನಿಸಿದ್ದಾರೆ.

ಸರ್ಕಾರದ ಯೋಜನೆಗಳ ಅಡಿಯಲ್ಲಿ ಸಾಮೂಹಿಕ ಮದುವೆ ಮಾಡಿಕೊಂಡ ಜೋಡಿಗಳಿಗೆ ನೀಡುವ ಹಣವನ್ನು ವೈಯಕ್ತಿಕವಾಗಿ ನೀಡುತ್ತಿರುವುದು ಎಷ್ಟು ಸಮಂಜಸ ಎಂಬ ಪ್ರಶ್ನೆಯನ್ನೂ ಅವರು ಎತ್ತಿದರು. ತಮ್ಮ ತಂದೆಯವರಾದ ಎಚ್.ಕೆ. ಪಾಟೀಲ್ ಕೆಲವೇ ಹಿಂಬಾಲಕರ ಮೂಲಕ ಜಿಲ್ಲೆಯನ್ನು ನಿರ್ವಹಿಸುತ್ತಿದ್ದಾರೆ ಎಂಬ ಆರೋಪಗಳು ಕಾಂಗ್ರೆಸ್ ಕಾರ್ಯಕರ್ತರಲ್ಲಿಯೇ ಕೇಳಿ ಬರುತ್ತಿವೆ ಎಂದು ಹೇಳಿದರು. ಕೃಷಿ ವಿಜ್ಞಾನ ಕೇಂದ್ರ ಹಾಗೂ ಕಾಟನ್ ಸೇಲ್ ಸೊಸೈಟಿ ಮುಂತಾದ ಸಂಸ್ಥೆಗಳನ್ನು ವೈಯಕ್ತಿಕ ಆಸ್ತಿಯಂತೆ ಬಳಸಲಾಗುತ್ತಿದೆ ಎಂಬ ಆಕ್ಷೇಪವನ್ನೂ ವ್ಯಕ್ತಪಡಿಸಿದ್ದಾರೆ.

ಗದಗ-ಬೆಟಗೇರಿ ನಗರವು ರಾಜ್ಯದ ಇತರೆ ನಗರಗಳಂತೆ ಯಾವಾಗ ಅಭಿವೃದ್ಧಿಯಾಗಲಿದೆ ಎಂಬುದನ್ನು ಸಾರ್ವಜನಿಕರು ಕಾತುರದಿಂದ ಕಾಯುತ್ತಿದ್ದಾರೆ ಎಂದು ಅರವಿಂದ ಹುಲ್ಲೂರ ಹೇಳಿದ್ದಾರೆ.

# ಮಹಿಳೆಯರ ಆರೋಗ್ಯ ಕಾಳಜಿ ಅಗತ್ಯ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಇಲ್ಲಿನ ಗುಲಗೊಂಜಿಕೊಪ್ಪದ ದುಂಡಿ ಬಸವೇಶ್ವರ ದೇವಸ್ಥಾನ ಆವರಣದಲ್ಲಿ ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗದ ಕಲಾ ಹಾಗೂ ವಾಣಿಜ್ಯ ಮಹಿಳಾ ಮಹಾವಿದ್ಯಾಲಯದಿಂದ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ವಾರ್ಷಿಕ ಶಿಬಿರದ ನಾಲ್ಕನೇ ದಿನವಾದ ಮಂಗಳವಾರ ವಿಶ್ವ ಆರೋಗ್ಯ ದಿನಾಚರಣೆ ನಿಮಿತ್ತ ಮಹಿಳಾ ಆರೋಗ್ಯ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಸಮುದಾಯ ಆರೋಗ್ಯ ಕೇಂದ್ರದ ಪ್ರಕಾಶ ಕರ್ಜಗಿ ಮಾತನಾಡಿ, ದಿನನಿತ್ಯದ ಜೀವನದಲ್ಲಿ ವೈಯಕ್ತಿಕ ಹಾಗೂ ಪರಿಸರ ನೈರ್ಮಲ್ಯ ಪಾಲನೆ ಮತ್ತು ಸಮತೋಲಿತ ಆಹಾರ ಸೇವನೆಯ ಮೂಲಕ ಅನೇಕ ರೋಗಗಳನ್ನು ತಡೆಗಟ್ಟಬಹುದು ಎಂದು ಹೇಳಿದರು.

ಮಹಿಳೆಯರು ತಮ್ಮ ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು ಮತ್ತು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಬೇಕು ಎಂದು ತಿಳಿಸಿದರು.

ಮಹಿಳೆಯರಲ್ಲಿ ರಕ್ತಹೀನತೆ, ಮುಟ್ಟಿನ ಸಮಸ್ಯೆ, ಲೈಂಗಿಕ ಸುರಕ್ಷತೆ, ಮಾನಸಿಕ ಆರೋಗ್ಯ ಸೇರಿದಂತೆ ಹಲವು ಸಮಸ್ಯೆಗಳ ಬಗ್ಗೆ ನಿರ್ಲಕ್ಷ್ಯ ತೋರದೆ ವೈದ್ಯರನ್ನು ಸಂಪರ್ಕಿಸಿ ಸಲಹೆ ಪಡೆಯಬೇಕು. ಕೀಳರಿಮೆಯಿಂದ ಅನೇಕ ರೋಗಗಳು ಗಂಭೀರವಾಗುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು.

ಸರಕಾರಿ ಆರೋಗ್ಯ ಕೇಂದ್ರಗಳಲ್ಲಿ ಮಹಿಳೆಯರಿಗಾಗಿ ಆಪ್ತ ಸಮಾಲೋಚನಾ ವಿಭಾಗಗಳು ಲಭ್ಯವಿದ್ದು, ಅವುಗಳ ಸದುಪಯೋಗ ಪಡೆದುಕೊಳ್ಳುವಂತೆ ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಈಶ್ವರಪ್ಪ ಸೊರಟೂರ ವಹಿಸಿದ್ದು, ಮುಖ್ಯ ಅತಿಥಿಗಳಾಗಿ ಪತ್ರಕರ್ತ ದಿಗಂಬರ ಪೂಜಾರ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ನೀಲಪ್ಪಗೌಡ ದುರಗಣ್ಣವರ, ನಿಂಗಪ್ಪ ಶಿವಬಸಣ್ಣವರ, ಚನ್ನಬಸಯ್ಯ ಗಡ್ಡದೇವರಮಠ, ಪ್ರಾಚಾರ್ಯ ವಿಜಯಕುಮಾರ ಬಿಳಿಎಲೆ, ಎಸ್‌ಎಸ್‌ಎಸ್ ಘಟಕ ಅಧಿಕಾರಿ ಪರಮೇಶ ತಡಹಾಳ, ರೇವಂತ ಕ್ಷತ್ರಿಯ, ಪ್ರಕಾಶ ಹರ್ಲಾಪುರ, ಉಪನ್ಯಾಸಕರಾದ ಎಸ್.ಬಿ. ಅಣ್ಣಿಗೇರಿ, ರವಿಕುಮಾರ ನೀರಲಗಿ, ಸಂಗೀತಾ ಲಕ್ಕಣ್ಣವರ, ಮಮತಾ ನಡುವಿನಮನಿ, ಮಾಲಾಶ್ರೀ ಹುರಳಿಕುಪ್ಪಿ, ಶಭಾನಾ ಕಲಕುಟ್ರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವಾಲಿಬಾಲ್ ಶಿಬಿರ ಆರಂಭ

**■ವಿಜಯಸಾಕ್ಷಿ ಸುದ್ದಿ, ಗದಗ**

ಫ್ರೆಂಡ್ಸ್ ಆಂಡ್ ಟೀಮ್ಸ್ ಸ್ಪೋರ್ಟ್ಸ್ ಕ್ಲಬ್ ಗದಗ ವತಿಯಿಂದ ದಿನಾಂಕ 5-4-2026 ರಿಂದ 5-5-2026ರ ವರೆಗೆ ಒಂದು ತಿಂಗಳ ಕಾಲ 12 ರಿಂದ 25 ವರ್ಷ ವಯೋಮಾನದ ಬಾಲಕ ಹಾಗೂ ಬಾಲಕಿಯರಿಗಾಗಿ ಪ್ರತಿದಿನ ಬೆಳಿಗ್ಗೆ 6-30 ರಿಂದ 8-30ರ ವರೆಗೆ ವಾಲಿಬಾಲ್ ಶಿಬಿರವನ್ನು ಹಳೇ ಕೋರ್ಟ್ ಹತ್ತಿರ ಇರುವ ವಾಲಿಬಾಲ್ ಮೈದಾನ ಗದಗ ಇಲ್ಲಿ ಆಯೋಜಿಸಲಾಗಿದೆ.

ನುರಿತ ತರಬೇತುದಾರರು ಕ್ರೀಡಾಪಟುಗಳಿಗೆ ತರಬೇತಿ ನೀಡುವರು. ಇದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಳ್ಳಬೇಕೆಂದು ಕ್ಲಬ್‌ದ ಅಧ್ಯಕ್ಷರಾದ ಗಂಗಾಧರ ಹಿರೇಮಠ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿ ಹಾಗೂ ನೋಂದಣಿಗಾಗಿ 9945520738, 7829949737, 9845117816, 9964124060, 9880073835 ಸಂಪರ್ಕಿಸಲು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ನಿಧನ


## ಜ್ಞಾನೇಶ್ವರ ಕೊಳ್ಳಿ



**ಬೆಟಗೇರಿ:** ದೇವಾಂಗ ಸಮಾಜದ ಹಿರಿಯರಾದ ಶ್ರೀಯುತ ಜ್ಞಾನೇಶ್ವರ ವಾಜಪ್ಪ ಕೊಳ್ಳಿ (ಬಾಳು) ಇವರು ಮಂಗಳವಾರ ದಿ. 7-4 -2026ರಂದು ನಿಧನರಾಗಿದ್ದಾರೆ.

ಮೃತರ ಅಂತಿಮಯಾತ್ರೆಯು ದಿ. 08.4.2026 ರಂದು 10-30ಗಂಟೆಗೆ ಬುಧವಾರ ದಿವಸ ಮುಂಜಾನೆ ಬೆಟಗೇರಿಯ ಗಾರ್ಗಿಪೇಟೆಯ ಯಡಿಯೂರ ಸಿದ್ಧಲಿಂಗೇಶ್ವರ ನಗರದ ದನದ ದವಾಖಾನೆಯ ಹಿಂಬಾಗದ ಸ್ವ-ಗೃಹದಿಂದ ಹೊರಡಲಿದೆ.

## ಸಿದ್ದಪ್ಪ ಹಡಪದ



**ಡಂಬಳ:** ಗ್ರಾಮದ ಹಡಪದ ಸಮಾಜದ ಹಿರಿಯರಾದ ಸಿದ್ದಪ್ಪ ಪಾಲಾಕ್ಷಪ್ಪ ಹಡಪದ (45) ಮಂಗಳವಾರ ನಿಧನರಾದರು. ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ, ಸಹೋದರರು ಹಾಗೂ ಅಪಾರ ಬಂಧು-ಬಳಗವಿದೆ.

# ಬೆಂಕಿ ಅವಘಡದಲ್ಲಿ ರೈತನ ಶೆಡ್, ಹೊಟ್ಟು ಭಸ್ಮ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಉಳ್ಳಟ್ಟಿ ರಸ್ತೆಗೆ ಹೊಂದಿಕೊಂಡಿರುವ ಜಮೀನಿನಲ್ಲಿ ಮಂಗಳವಾರ ಸಂಭವಿಸಿದ ಬೆಂಕಿ ಅವಘಡದಲ್ಲಿ ರೈತನ ಶೆಡ್, ಹೊಟ್ಟು ಹಾಗೂ ಬೋರ್‌ವೆಲ್ ವ್ಯವಸ್ಥೆ ಸುಟ್ಟು ಕರಕಲಾಗಿದ್ದು, ಅಪಾರ ನಷ್ಟ ಉಂಟಾಗಿದೆ.

ಪಟ್ಟಣದ ನಾಗಪ್ಪ ತಿಪ್ಪಣ್ಣ ಇಚ್ಚಂಗಿ ಅವರು ಈ ವರ್ಷದಿಂದ ಹೈನುಗಾರಿಕೆ ಆರಂಭಿಸಲು ಲಕ್ಷಾಂತರ ರೂ. ವೆಚ್ಚದಲ್ಲಿ ಬೋರ್‌ವೆಲ್ ಅಳವಡಿಸಿ, ತಗಡಿನ ಶೆಡ್ ನಿರ್ಮಿಸಿ ನಾಲ್ಕು ಟ್ರಾಕ್ಟರ್ ಹೊಟ್ಟು ಸಂಗ್ರಹಿಸಿದ್ದರು. ಆದರೆ ಕಿಡಗೇಡಿಗಳಿಂದ ಹೊತ್ತಿದ ಬೆಂಕಿಯಿಂದ ಬೋರ್‌ವೆಲ್ ವೈಯರ್, ಹೊಟ್ಟು ಹಾಗೂ ಶೆಡ್ ಸಂಪೂರ್ಣ ನಾಶವಾಗಿದೆ. ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ಆಗಮಿಸುವಷ್ಟರಲ್ಲಿ ಎಲ್ಲವೂ ಬೂದಿಯಾಗಿತ್ತು.

ಈ ಅವಘಡದಿಂದ ರೈತನ ಹೊಸ ಕನಸುಗಳು ಭಸ್ಮವಾಗಿದ್ದು, ಜೀವನಕ್ಕೆ ದೊಡ್ಡ ಹೊಡೆತ ಬಿದ್ದಂತಾಗಿದೆ. ಹೊರವಲಯಗಳಲ್ಲಿ ಸಿಗರೇಟು, ಗಾಂಜಾ, ಮದ್ಯದ ವ್ಯಸನಿಗಳ ಅಲಕ್ಷ್ಯದಿಂದ ಬೇಸಿಗೆ ವೇಳೆಯಲ್ಲಿ ಇಂತಹ ಘಟನೆಗಳು ಹೆಚ್ಚುತ್ತಿರುವುದಾಗಿ ಸ್ಥಳೀಯರು

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka